MAA ಫ್ರೆಂಡ್ಸ್ ಸಾರಥ್ಯದಲ್ಲಿ...

www.yuvamarga.com Yuva Marga yuva_marga_

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

YUVA MARGA KANNADA DAILY NEWS PAPER

ಸಂಪುಟ: 05 | ಸಂಚಿಕೆ: 71 | ಶುಕ್ರವಾರ : 02-01-2026 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 71 | FRIDAY : 02-01-2026 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

# ನಾನು ಸಿಎಂ ಆಕಾಂಕ್ಷಿ
# ನೇರ ಅಖಾಡಕ್ಕಿಳಿದ ಪರಮೇಶ್ವರ್



**ಬೆಂಗಳೂರು, ಜ.1–** ರಾಜಕೀಯವಾಗಿ ಪದೋನ್ನತಿ ಹೊಂದುವ ಮಹಾತ್ವಕಾಂಕ್ಷೆ ತಮಗೂ ಇದೆ ಎಂದು ಹೇಳುವ ಮೂಲಕ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಮುಖ್ಯಮಂತ್ರಿ ಹುದ್ದೆಯ ರೇಸ್‌ಗೆ ನೇರವಾಗಿ ಅಖಾಡಕ್ಕಿಳಿದಿದ್ದಾರೆ.

ನಾಯಕತ್ವ ಬದಲಾವಣೆ ಯಾಗಬೇಕು, ತಮಗೆ ಮುಖ್ಯಮಂತ್ರಿ ಸ್ಥಾನ ದೊರೆಯಬೇಕು ಎಂದು ಈವರೆಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತ್ರ ಪಟ್ಟು ಹಿಡಿದು ನಾನಾ ರೀತಿಯ ಕಸರತ್ತುಗಳನ್ನು ನಡೆಸುತ್ತಿದ್ದರು. ಈಗ ಪರಮೇಶ್ವರ್ ತೆರೆಮರೆಯಲ್ಲಿ ತಮದೇ ಆದ ಲಾಬಿ ನಡೆಸುವ ಮೂಲಕ ನೇರವಾಗಿ ಸ್ಪರ್ಧೆಗಿಳಿಯುತ್ತಿದ್ದಾರೆ.

ಕೆಲವು ಹಿರಿಯ ನಾಯಕರು ದೆಹಲಿಗೆ ಹೋಗಿ ಪರಮೇಶ್ವರ್ ಪರವಾಗಿ ವರದಿ ನೀಡಿದ್ದಾರೆ. ಪರಮೇಶ್ವರ್ ಅವರನ್ನು ಮುಖ್ಯಮಂತ್ರಿ ಮಾಡುವುದರಿಂದ ಪಕ್ಷಕ್ಕಾಗುವ ಲಾಭ ನಷ್ಟಗಳ ಬಗ್ಗೆ ಪಕ್ಷದ ವರಿಷ್ಠರಿಗೆ ವರದಿ ನೀಡಿದ್ದಾರೆ. ಅಲ್ಲಲ್ಲಿ ಪರಮೇಶ್ವರ್ ಪರವಾದ ಪ್ರತಿಭಟನೆಗಳು ನಡೆದಿದ್ದವು.

ಪರಮೇಶ್ವರ್ ಮುಖ್ಯಮಂತ್ರಿ ಯಾಗಬೇಕು ಎಂಬ ಚರ್ಚೆಗಳ ನಡುವೆ ನಾನಾ ರೀತಿಯ ಗೊಂದಲದ ವಾತಾವರಣಗಳು ಸೃಷ್ಟಿಯಾಗು ತ್ತಿವೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬಣ ಒಂದು ವೇಳೆ ನಾಯಕತ್ವ ಬದಲಾವಣೆಯಾಗುವುದೇ ಆದರೆ ದಲಿತರಿಗೆ ಮುಖ್ಯಮಂತ್ರಿ ಆಗಲು ಅವಕಾಶ ನೀಡಬೇಕು ಎಂದು ಪ್ರತಿಪಾದಿಸುವ ಮೂಲಕ ಪರೋಕ್ಷವಾಗಿ ಪರಮೇಶ್ವರ್ ಹೆಸರನ್ನು ಮುನ್ನೆಲೆಗೆ ತಂದಿದೆ.

ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡುವ ವೇಳೆಯಲ್ಲಿ ಪರಮೇಶ್ವರ್, ತಾವು ಪದೋನ್ನತಿ ಪಡೆಯುವ ಮಹಾತ್ವಾಕಾಂಕ್ಷೆ ಹೊಂದಿರುವುದಾಗಿ ಹೇಳಿದ್ದಾರೆ.

ರಾಜಕೀಯವಾಗಿ ತಮ ವೈಯಕ್ತಿಕ ಪದೋನ್ನತಿ ವಿಚಾರವಾಗಿ ಪಕ್ಷದ ಹೈಕಮಾಂಡ್ ನಿರ್ಧಾರ ತೆಗೆದುಕೊಳ್ಳಬೇಕು. ರಾಜಕೀಯವಾಗಿ ನಾನು ಆಶಾವಾದಿಯಾಗಿಯೇ ಈವರೆಗೂ ಬದುಕಿದ್ದೇನೆ. ಎಲ್ಲರಿಗೂ ಜೀವನದಲ್ಲಿ ಮಹತ್ವಕಾಂಕ್ಷಿಗಳಿರುತ್ತವೆ. ಅದೇ ರೀತಿ ನನಗೂ ಮಹತ್ವಾಕಾಂಕ್ಷೆ ಇದ್ದೇ ಇದೆ ಎಂದರು.

ರಾಜಕೀಯಕ್ಕೆ ಬಂದಾಗ ಶಾಸಕರಾಗಬೇಕು ಎಂಬ ಅಭಿಲಾಷೆಯಿತ್ತು, ಆನಂತರ ಮಂತ್ರಿಯಾಗಬೇಕು ಎಂಬ ಆಕಾಂಕ್ಷೆ ಇತ್ತು. ಪ್ರತಿ ಹಂತದಲ್ಲೂ ಮುಂದಿನ ಹಂತಕ್ಕೇರುವ ಅಭಿಲಾಷೆಗಳಿರುತ್ತವೆ. ಆದರೆ ಅಂತಿಮವಾಗಿ ಹೈಕಮಾಂಡ್ ನಿರ್ಧಾರಕ್ಕೆ ಬಿಟ್ಟ ವಿಚಾರ ಎಂದರು.

ರಾಜ್ಯ ರಾಜಕೀಯದಲ್ಲಿ ವಾತಾವರಣ ಯಾರಿಗೆ ಪೂರಕವಾಗಿದೆ ಎಂದು ಪ್ರತಿನಿತ್ಯವೂ ಚರ್ಚೆ ಯಾಗುತ್ತಿದೆ. ಎಲ್ಲವನ್ನೂ ಸೂಕ್ಷ್ಮವಾಗಿ ಗಮನಿಸಲಾಗುತ್ತಿದೆ ಎಂದು ಹೇಳಿದರು.

ನಿರ್ಮಲ ತುಂಗಭದ್ರಾ ಅಭಿಯಾನ 3 ನೇ ಹಂತದ ಜಲಜಾಗೃತಿ-ಜನಜಾಗೃತಿ ಪಾದಯಾತ್ರೆ

# ಜೀವಜಲವನ್ನು ಮಾಲಿನ್ಯಗೊಳಿಸದಂತೆ ಜಾಗೃತರಾಗೋಣ: ಹಂಪಯ್ಯನಾಯಕ



ಯುವಮಾರ್ಗ ಸುದ್ದಿ

**ಮಾನ್ವಿ,ಜ.1–** ಪಟ್ಟಣದ ಟಿ.ಎ.ಪಿ.ಸಿ.ಎಂ.ಎಸ್. ಬಯಲು ಜಾಗದಲ್ಲಿ ರಾಷ್ಟ್ರೀಯ ಸ್ವಾಭಿಮಾನ ಆಂದೋಲನ ನವದೆಹಲಿ ಹಾಗೂ ಪರ್ಯಾವರಣ ಟ್ರಸ್ಟ್ ಶಿವಮೊಗ್ಗ,ನಿರ್ಮಲ ತುಂಗಭದ್ರಾ ಅಭಿಯಾನ ಸಮಿತಿ ಸಂಯುಕ್ತಾಶ್ರಯದಲ್ಲಿ ನಡೆದ ನಿರ್ಮಲ ತುಂಗಭದ್ರಾ ಅಭಿಯಾನ 3 ನೇ ಹಂತದ ಜಲಜಾಗೃತಿ-ಜನಜಾಗ್ರತಿ ಪಾದಯಾತ್ರೆ ಕಾರ್ಯಕ್ರಮವನ್ನು ಶಾಸಕ ಹಂಪಯ್ಯನಾಯಕ ಉದ್ಘಾಟಿಸಿ ಮಾತನಾಡಿ ನಮ್ಮ ನಾಡಿನ ನದಿಗಳು ಜನರಿಗೆ ಜಾನುವಾರುಗಳಿಗೆ, ಪ್ರಾಣಿ,ಪಕ್ಷಿಗಳಿಗೆ ಜೀವಜಲವನ್ನು ನೀಡುವುದರೊಂದಿಗೆ ನಮ್ಮೆಲರಿಗೂ ಮುಖ್ಯವಾಗಿ ಆಗತ್ಯವಾಗಿರುವ ಕೃಷಿ ಆಹಾರದ ಉತ್ಪಾದನೆಗೆ ಕೂಡ ನೀರನ್ನು ನೀಡುತ್ತವೆ ನಮ್ಮ ರಾಜ್ಯದ ಜೀವನಾಡಿಯಾಗಿರುವ ತುಂಗಭದ್ರ ನದಿಗೆ ನಾವು ನಿತ್ಯ ಪಟ್ಟಣಗಳ ತ್ಯಾಜ್ಯ,ಕೈಗಾರಿಕೆಗಳ ತ್ಯಾಜ್ಯವನ್ನು ಹರಿಸುವ ಮೂಲಕ ನದಿಯ ನೀರನ್ನು ಕಲುಷಿತಗೊಳಿಸಿ ಇಂದು ನದಿಗಳ ನೀರನ್ನು ಕುಡಿಯುವುದನ್ನು ಕೂಡ ಯೋಗ್ಯವಾಲ್ಲದ ಹಾಗೆ ಮಾಡಿಕೊಂಡಿದ್ದೇವೆ ಅದ್ದರಿಂದ ಸರ್ಕಾರದ ಜೋತೆಗೆ ನಾವು ಕೂಡ ವೈಯುಕ್ತಿಕವಾಗಿ ನದಿ ಪರಿಸರವನ್ನು ಮಾಲಿನ್ಯಗೊಳಿಸದಂತೆ ಉತ್ತಮ ಆರೋಗ್ಯಕ್ಕಾಗಿ ನದಿಯ ನೀರನ್ನು ಶುದ್ದವಾಗಿರುವಂತೆ ನೋಡಿಕೊಳ್ಳುವ ಜವಾಬ್ದರಿ ಕೂಡ ಪ್ರತಿಯೊಬ್ಬರಾದಾಗಿದ್ದು ,ನಿರ್ಮಲ ತುಂಗಭದ್ರಾ ಅಭಿಯಾನ ಸಮಿತಿ ಯು ಜನರಲ್ಲಿ ಜಾಗೃತಿಯನ್ನು ಮೂಡಿಸುತ್ತಿದೆ ಎಂದು ತಿಳಿಸಿದರು.

ರಾಷ್ಟ್ರೀಯ ಸ್ವಾಭಿಮಾನ ಆಂದೋಲನ ಸಮಿತಿಯ ರಾಷ್ಟ್ರೀಯ ಅಧ್ಯಕ್ಷರಾದ ಬಸವರಾಜ್ ಪಾಟೀಲ್ ವೀರಾಪುರ ಮಾತನಾಡಿ ವಿಶ್ವ ಸಂಸ್ಥೆಯು ನಮ್ಮ ದೇಶದಲ್ಲಿನ 80 ನದಿಗಳು ಅಪಾಯದಲ್ಲಿರುವುದನ್ನು ಗುರುತಿಸಿ ಕೇಂದ್ರ ಸರ್ಕಾರಕ್ಕೆ ವರದಿಯನ್ನು ನೀಡಿದ್ದೆ. ಪಶ್ಚಿಮಘಟದಲ್ಲಿ ರಾಜ್ಯದ ಬಹುತೇಕ ನದಿಗಳು,ತುಂಗ,ಭದ್ರೆ,ಶರವಾತಿ,ನೇತ್ರವಾತಿ ನದಿಗಳ ಉಗಮ ಸ್ಥಾನವಾಗಿದ್ದಾರು ಕೂಡ ಸರ್ಕಾರ ಅಂತಹ ಸೂಕ್ಷ್ಮ ಪ್ರದೇಶವಾದ ಪಶ್ಚಿಮ ಘಟಗಳ ಮೇಲೆ ಅಭಿವೃದ್ದಿಯ ಹೆಸರಿನಲ್ಲಿ ಮೀತಿ ಮೀರಿದ ಒತ್ತಾಡ ಹಾಕುತ್ತಿರುವುದರಿಂದ ಹಾಗೂ ನದಿಗೆ ಜಲಾಶಯ ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಚೆಕ್ ಡ್ಯಾಂ ಗಳನ್ನು ನಿರ್ಮಾಣ ಮಾಡುತ್ತಿರುವುದರಿಂದ ನದಿಗಳಲ್ಲಿನ ಕನಿಷ್ಟ ಹರಿವಿನ ಪ್ರಮಾಣ ಕೂಡ ಕಡಿಮೆಯಾಗಿರುವುದರಿಂದ ನದಿಗಳಲ್ಲಿ ಮಾಲಿನ್ಯ ಹೆಚ್ಚಾಳಕ್ಕೆ ಕಾರಣವಾಗುತ್ತಿದೆ.ನಾಸ ಉಪಗ್ರಹ ಚಿತ್ರದ ವರದಿಯಂತೆ 2040 ರಲ್ಲಿ ತುಂಗಭದ್ರೆ ನದಿಯಿಂದ ಕುಡಿಯುವುದಕ್ಕೆ ಮಾತ್ರ ನೀರು ಪಡೆಯುವುದಕ್ಕೆ ಸಾಧ್ಯವಾಗಲಿದೆ ಎಂದು ವರದಿ ತಿಳಿಸುತ್ತದೆ.ನಮ್ಮ ಕೃಷಿಗೆ ನೀರು ದೊರೆಯುವುದು ಕೂಡ ಕಷ್ಟವಾಗಲಿದೆ.ತುಂಗಭದ್ರ ನದಿ ರಾಜ್ಯದ 9 ಜೀಲ್ಲೆಗಳಲ್ಲಿ ಹರಿದು ಆಂಧ್ರಪ್ರದೇಶದ ಕರ್ನೂಲ್ ಜಿಲ್ಲೆಯ ಜೋಗುಳಾಂಬೆ ಪುಣ್ಯಕ್ಷೇತ್ರದಲ್ಲಿ ಕೃಷ್ಣ ನದಿಯೊಂದಿಗೆ ಕೂಡಿಕೊಂಡು ಹರಿಯುತ್ತಾಳೆ . ಕಡಿನ ವನಚೇದ ಶೇ33 ರಷ್ಟು ಇದ್ದಾಗ ಮಾತ್ರ ನಮಗೆ ಪ್ರಾಣವಾಯು ದೊರೆಯುವುದಕ್ಕೆ ಸಾಧ್ಯ ಅದ್ದರಿಂದ ನಾಡಿನ ಧರ್ಮಗುರುಗಳು, ರಾಜಕೀಯ ಧುರೀಣರು, ವಿಜ್ಞಾನಿಗಳು,ಪರಿಸಾರ ಪ್ರೇಮಿಗಳು,ಸಮಾಜದ ಎಲ್ಲಾ ವರ್ಗದವರು ,ರೈತರು, ಕೈಗಾರಿಕೋದ್ಯಮಿಗಳು ನದಿಗಳ ಸಂರಕ್ಷಣೆಗೆ ಮುಂದಾಗಬೇಕಾಗಿದೆ ರಾಷ್ಟ್ರೀಯ ಸ್ವಾಭಿಮಾನ ಆಂದೋಲನ ಸಮಿತಿಯ ವತಿಯಿಂದ ದಕ್ಷಿಣ ಭಾರತದ ತುಂಗಭದ್ರ ನದಿಯ ಸ್ವಚ್ಚತೆಗೆ ಮುಂದಾಗಿದ್ದೇವೆ ಅದರ ಅಂಗವಾಗಿ ಜನರಲ್ಲಿ ಜಾಗೃತಿ ಮೂಡಿಸುವ ಅಂಗವಾಗಿ ,ನಿರ್ಮಲ ತುಂಗಭದ್ರಾ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದ್ದು ಶೃಂಗೇರಿಯಿಂದ ಮಂತ್ರಾಲಯದ ವರೆಗೆ 600 ಕಿ.ಮೀ.ವರೆಗೆ ಒಂದು ನದಿಗಾಗಿ ಪಾದಯಾತ್ರೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

3 ನೇ ಹಂತದ ನಿರ್ಮಲ ತುಂಗಭದ್ರಾ ಅಭಿಯಾನ ಸಂಚಾಲಕರಾದ ಮಹಿಮಾ ಪಾಟೀಲ್ ಮಾತನಾಡಿದರು

ದಿವ್ಯ ಸಾನಿಧ್ಯವನ್ನು ಕಲ್ಮಠ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯಶಿವಾಚಾರ್ಯಮಹಾಸ್ವಾಮಿಗಳು,

ಕರೆಗುಡ್ಡ ಶ್ರೀ ಮಹಾಂತೇಶ್ವರ ಮಠದ ಶ್ರೀ ಮಾಹಾಂತಲಿಂಗ ಮಹಾಸ್ವಾಮಿಗಳು, ಮುಸ್ಲಿಂ ಧಾರ್ಮ ಗುರುಗಳಾದ (2ನೇ ಪುಟಕ್ಕೆ>>>)

# ಸಮಗ್ರ ಕೃಷಿ ಪದ್ಧತಿ ಎಂದೆಂದಿಗೂ ಉತ್ತಮ: ಕುಲಪತಿ ಡಾ.ಎಂ.ಹನುಮಂತಪ್ಪ

ಯುವಮಾರ್ಗ ಸುದ್ದಿ




**ರಾಯಚೂರು,ಜ.1–** ಸಮಗ್ರ ಕೃಷಿ ಪದ್ಧತಿಯು ಎಂದೆಂದಿಗೂ ಉತ್ತಮ ಕೃಷಿ ಪದ್ಧತಿಯಾಗಿದ್ದು, ವಿಶ್ವವಿದ್ಯಾಲಯದ ವಿಜ್ಞಾನಿಗಳು ಇದನ್ನು ಮನ 'ಗಂಡು ವಿಸ್ತರಣಾ ಚಟುವಟಕೆಗಳಲ್ಲಿ ತೊಡಗಿಸಿಕೊಳ್ಳಬೇಕೆಂದುವಿಜ್ಞಾನಗಳ ವಿಶ್ವವಿದ್ಯಾಲಯ ಕುಲಪತಿಗಳಾದ ಡಾ. ಎಂ. ಹನುಮಂತಪ್ಪ ಅವರು ಸಲಹೆ ನೀಡಿದರು.

ಡಿಸೆಂಬರ್ 31ರ ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಜಗಜ್ಯೋತಿ ಬಸವೇಶ್ವರ ಸಭಾಂಗಣದಲ್ಲಿ ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ರಾಷ್ಟ್ರೀಯ ಕೃಷಿ ಅಭಿವೃದ್ಧಿ ಸಹಕಾರಿ ನಿಯಮಿತ, ಬಾರಾಮುಲ್ಲಾ, ಜಮ್ಮು ಮತ್ತು ಕಾಶ್ಮೀರ ಇವರುಗಳ ಸಹಯೋಗದಲ್ಲಿ ಮೂರು ದಿನಗಳ ಅವಧಿಯ ಕೃಷಿ, ಪಶುವೈದ್ಯಕೀಯ ಮತ್ತು ಕೃಷಿಗೆ ಸಂಬಂಧಿತ ವಿಷಯಗಳಲ್ಲಿ ಸುಸ್ಥಿರ ನಾವಿನ್ಯತೆಗಳ ಕುರಿತಾದ ಅಂತರಾಷ್ಟ್ರೀಯ ಸಮ್ಮೇಳನದ ಸಮಾರೋಪದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸಮ್ಮೇಳನಗಳು, ವಿಚಾರ ಸಂಕಿರಣಗಳು, ಕಾರ್ಯಾಗಾರಗಳು ಜ್ಞಾನ ಮತ್ತು ಕೌಶಲ್ಯಗಳನ್ನು ವಿನಿಮಯ ಮಾಡಿಕೊಳ್ಳಲು ಉತ್ತಮ ವೇದಿಕೆಯಾಗಿವೆ. ಯಾವುದೇ ವಿಷಯದಲ್ಲಿ ಪ್ರಸ್ತುತಿ ಜ್ಞಾನವನ್ನು ಪಡೆಯುವುದು ಅತ್ಯವಶ್ಯವಾಗಿದೆ. ಅದರಲ್ಲೂ ವಿದ್ಯಾರ್ಥಿಗಳು ಇಂತಹ ಸಮ್ಮೇಳನಗಳಲ್ಲಿ ತಪ್ಪದೇ ಭಾಗವಹಿಸಬೇಕೆಂದು ಕಿವಿಮಾತು ಹೇಳಿದರು. (2ನೇ ಪುಟಕ್ಕೆ>>>)

# ವಿಕಲಚೇತನರ ಸೇವೆಗೆ ಶಿವಕುಮಾರ್ ಚಲ್ಮಲ್‌ಗೆ ಜಿಲ್ಲಾ ಪ್ರಶಸ್ತಿ

ಯುವಮಾರ್ಗ ಸುದ್ದಿ




**ಮಾನ್ವಿ,ಜ.1–** ಪಟ್ಟಣದ ನಿವಾಸಿ ಹಾಗೂ ಸಂಕಲ್ಪ ವಿಕಲಚೇತನರ ಒಕ್ಕೂಟ, ರಾಯಚೂರು ಇದರ ಜಿಲ್ಲಾಧ್ಯಕ್ಷರಾದ ಶಿವಕುಮಾರ್ ಚಲ್ಮಲ್ ಅವರಿಗೆ ವಿಕಲಚೇತನರ ಕ್ಷೇತ್ರದಲ್ಲಿ ಸಲ್ಲಿಸಿರುವ ನಿರಂತರ ಸೇವೆಯನ್ನು ಪರಿಗಣಿಸಿ ಜಿಲ್ಲಾ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

ರಾಯಚೂರಿನ ಶ್ರೀ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ರಾಯಚೂರು, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ವಿಕಲಚೇತನರ ಕಲ್ಯಾಣ ಕ್ಷೇತ್ರದಲ್ಲಿ ಶ್ರಮಿಸುತ್ತಿರುವ ವಿವಿಧ ಸಂಘ ಸಂಸ್ಥೆ ಒಕ್ಕೂಟಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ವಿಶ್ವ ವಿಕಲಚೇತನರ ದಿನಾಚರಣೆ 2025 ಕಾರ್ಯಕ್ರಮದಲ್ಲಿ ಈ ಗೌರವ ನೀಡಲಾಯಿತು.

ಸ್ವತಃ ದೈಹಿಕ ವಿಕಲಚೇತನರಾಗಿರುವ ಶಿವಕುಮಾರ್ ಚಲ್ಮಲ್ ಅವರು, ವಿಕಲಚೇತನರ ಸಂಘಟನೆ ನಿರ್ಮಾಣ, ಸರ್ಕಾರದ ಸೌಲಭ್ಯಗಳು ಅರ್ಹರಿಗೆ ತಲುಪುವಂತೆ ನೆರವು, ಜಾಗೃತಿ ಕಾರ್ಯಕ್ರಮಗಳು, ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳ ಆಯೋಜನೆಯ ಮೂಲಕ ವಿಕಲಚೇತನರ ಪ್ರತಿಭೆ ಮತ್ತು ಆತ್ಮವಿಶ್ವಾಸವನ್ನು ಸಮಾಜದ ಮುಂದೆ ತರುವಲ್ಲಿ ಮಹತ್ವದ (2ನೇ ಪುಟಕ್ಕೆ>>>)

# ಅಮರ ಶಿಲ್ಪಿ ಜಕಣಾಚಾರಿ ಜಯಂತಿ ಆಚರಣೆ




ಯುವಮಾರ್ಗ ಸುದ್ದಿ

**ಮಾನ್ವಿ,ಜ.1–** ಪಟ್ಟಣದ ತಹಸೀಲ್ದಾರ್ ಕಚೇರಿಯಲ್ಲಿ ತಾಲೂಕು ಆಡಳಿತ ಹಾಗೂ ವಿಶ್ವಕರ್ಮ ಸಮುದಾಯದ ವತಿಯಿಂದ ಅಮರ ಶಿಲ್ಪಿ ಜಕಣಾಚಾರಿ ಜಯಂತಿಯ ಅಂಗವಾಗಿ ಅಮರ ಶಿಲ್ಪಿ ಜಕಣಾಚಾರಿಯವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ತಹಸೀಲ್ದಾರ್ ಭೀಮರಾಯ ಬಿ.ರಾಮಸಮುದ್ರ ಮಾತನಾಡಿ ನಮ್ಮ ನಾಡಿನ ಹೆಸರಂತ ಶಿಲ್ಪ ಕಲೆಗಳ ನೆಲೆವೀಡಾಗಿರುವ ಬೇಲುರು ಹಾಗೂ ಹಳೆ ಬೀಡುಗಳಲ್ಲಿನ ಭವ್ಯವಾದ ಸುಂದರ ,ದೇವಸ್ಥಾನಗಳಲ್ಲಿ ಅಮರ ಶಿಲ್ಪಿ ಜಕಣಾಚಾರಿಯವರ ಅದ್ಭುತ ಕಲೆಯನ್ನು ನಾವು ಕಣಬಹುದಾಗಿದೆ ವಿಶ್ವಕರ್ಮ ಸಮುದಾಯದವರು ತಮ್ಮ ಪಂಚಕಲೆಗಳಿಂದ ಜನರಿಗೆ ಅಗತ್ಯವಾದ ಸಲಕರಣೆಗಳನ್ನು ಹಾಗೂ ಸುಂದರವಾದ ಮೂರ್ತಿಗಳನ್ನು ನೀಡುತ್ತ ಬಂದಿದ್ದಾರೆ ವಿಶ್ವಕರ್ಮ ಸಮುದಾಯದವರು ತಮ್ಮ ಪರಂಪರಿಕವಾದ ಕಲೆಯಜೋತೆಗೆ ತಮ್ಮ ಮಕ್ಕಳಿಗೆ ಉತ್ತಮವಾದ ಶಿಕ್ಷಣವನ್ನು ನೀಡುವಂತೆ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ವಿಶ್ವಕರ್ಮ ಸಮುದಾಯದ ಸಾಧಕರಾದ ದೇವರಾಜ ಆಚಾರ್ ಶಿಲ್ಪಿ ಸಂಗಪುರ, ಕಾಳಪ್ಪಚಾರ್ ಬಡಿಗೇರ ಮಾನ್ವಿ, ಅಯ್ಯಪ್ಪ ವಿಶ್ವಕರ್ಮ, ಶಿವಪ್ಪಚಾರ್ ವಿಶ್ವಕರ್ಮ, ಜೆ.ಸಿ, ಅಂಬಣ್ಣಚಾರ್ ರವರನ್ನು ತಾಲೂಕು ಆಡಳಿತವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಗ್ರೇಡ್-2 ತಹಸೀಲ್ದಾರ್ ಅಬ್ದುಲ್ ವಾಹಿದ್, ಗುಮ್ಮ ಬಸವರಾಜ, ವಿಶ್ವಕರ್ಮ ಸಮುದಾಯದ ಮುಖಂಡರಾದ ಮನೋಹರ್ ವಿಶ್ವಕರ್ಮ ವಕೀಲರು,ಮೋಹನಾಚಾರಿ, ವೀರೇಶಚಾರಿ, ಮೌನೇಶಚಾರಿ ಹಾಲ್ವಿ, ಸತೀಶ ಆಚಾರಿ, ಷಣ್ಮುಖಚಾರಿ, ಮಹೇಶಚಾರಿ, ಗವಿಯಪ್ಪಾಚಾರಿ, ಶ್ರೀಶೈಲಮಾಸ್ಟರ್,ಪಂಡುರಂಗ ವಿಶ್ವಕರ್ಮ, ಧನುಂಜಯ್ಯ ಆಚಾರಿ,ಗದ್ವಲ ವೇಂಕಟೇಶ,ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಭಾಗವಹಿಸಿದರು.

# ಮೊದಲನೇಯ ಪುಟದಿಂದ

### ಅಂತರಾಷ್ಟ್ರೀಯ ಸಮ್ಮೇಳನದ ಸಮಾರೋಪ

## ಸಮಗ್ರ ಕೃಷಿ ಪದ್ಧತಿ ಎಂದೆಂದಿಗೂ ಉತ್ತಮ: ಕುಲಪತಿ ಡಾ.ಎಂ.ಹನುಮಂತಪ್ಪ

ಒಂದು ಸಮೀಕ್ಷೆ ಪ್ರಕಾರ ಸಂಶೋಧನೆಯಲ್ಲಿ ಒಂದು ರೂಪಾಯಿ ಖರ್ಚು ಮಾಡಿದರೆ ಅದರಿಂದ ರೂ. 13.50 ಲಾಭ ಬರುವುದು, ವಿಸ್ತರಣೆಯಲ್ಲಿ 7.00 ರೂ.ಲಾಭ ಬರುವುದು ಮತ್ತು ಕೃಷಿ ಶಿಕ್ಷಣದಲ್ಲಿ ಒಂದು ರೂಪಾಯಿಯನ್ನು ವ್ಯಯಿಸಿದರೆ ಕೇವಲ 2.05 ರೂ.ಲಾಭ ಬರುವುದು. ಆದ್ದರಿಂದ ವಿದ್ಯಾರ್ಥಿಗಳಿಗಾಗಲೀ, ರೈತರಿಗಾಗಲೀ ಪರಿ ಪೂರ್ಣ ಮಟ್ಟದ ಕೃಷಿ ಶಿಕ್ಷಣವು ದೊರೆಯುವಂ ತಾಗಬೇಕೆಂದರು.

ಇಂದಿನ ವಿದ್ಯಾರ್ಥಿಗಳು ಕೃಷಿ ಶಿಕ್ಷಣವನ್ನು ಪರಿಪೂರ್ಣತೆಯಿಂದ ಪಡೆದು ಉತ್ತಮ ಉದ್ಯಮಿದಾರರಾಗಿ ಹತ್ತಾರು ಜನಕ್ಕೆ ಉದ್ಯೋಗ ಕೊಡುವಂತಾಗಬೇಕೆಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಕೃತಕ ಬುದ್ಧಿಮತ್ತೆ, ಯಂತ್ರ ಕಲಿಕೆ, ಡ್ರೋನ್ ಬಳಕೆ ಇತ್ಯಾದಿಗಳನ್ನು ವಿದ್ಯಾರ್ಥಿಗಳು ಹಾಗೂ ವಿಜ್ಞಾನಿ ಗಳು ಕರಗತಮಾಡಿಕೊಂಡು ಕಾರ್ಯಸಾಧುವಾದ ತಂತ್ರಜ್ಞಾನ, ಸುಸ್ಥಿರ ಆರ್ಥಿಕತೆ ಹಾಗೂ ಸಮಾಜ ನಿರೀಕ್ಷಿತ ಅಂಶಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದರು.

ಈ ವೇಳೆ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿದ್ದ ವಿಶ್ವವಿದ್ಯಾಲಯದ ಶಿಕ್ಷಣ ನಿರ್ದೇ ಶಕರಾದ ಡಾ. ಗುರುರಾಜ ಸುಂಕದ ಅವರು ಮಾತನಾಡಿ, ಕೃಷಿಯೇ ನಮ್ಮೆಲ್ಲರ ಜೀವಾಳವಾಗಿದ್ದು, ಶೇ.48 ರಷ್ಟು ಜನ ನೇರವಾಗಿ ಕೃಷಿ ಅವಲಂ ಬಿತರಾಗಿರುವರು. ನಮ್ಮ ದೇಶದ ಜಿ.ಡಿ.ಪಿ ಗೆ ಶೇ. 17 ರಷ್ಟು ಕೊಡುಗೆಯು ಕೃಷಿಯದ್ದಾಗಿದೆ. ಆದಾಗ್ಯೂ ಹೆಚ್ಚು ಸಂಕೀರ್ಣವಾದ ಈ ಕ್ಷೇತ್ರವನ್ನು ಕಡೆಗಣಿಸಲ್ಪಟ್ಟಿರುವುದು ವಿಷಾದನೀಯವೆಂದರು.ರೈತರೇ ಮೊದಲು ಎಂಬ ಸಿದ್ಧಾಂತದೊಂದಿಗೆ ನಾವೆಲ್ಲರೂ ಕೆಲಸಮಾಡಬೇಕಾಗಿದೆ. ವಿದ್ಯಾರ್ಥಿ ಗಳೂ ಕೂಡ ಕೃಷಿ ಶಿಕ್ಷಣವನ್ನು ಪರಿಪೂರ್ಣತೆಯಿಂದ ಕಲಿತರೆ ಮಾತ್ರ ಉತ್ತಮ ಉದ್ಯೋಗ ಅವಕಾಶಗಳು ದೊರೆಯುವೆವು ಎಂದು ಕಿವಿಮಾತು ಹೇಳಿದರು. ಈ ವೇಳೆ ಸಮ್ಮೇಳನದ ಸಂಯೋಜಕರಾದ ಡಾ.ಆರ್.ಎ. ಶಾಹ ಬಾರಾಮುಲ್ಲ ಅವರು ಮಾತನಾ ಡಿ, ಇಂತಹ ಸಮ್ಮೇಳನಗಳು ಜ್ಞಾನಾರ್ಜನೆ, ಮತ್ತು ಕೌಶಲ್ಯಭಿವೃದ್ಧಿಗೆ ಪೂರಕವಾಗಿವೆ. ಆದ್ದರಿಂದ ವಿದ್ಯಾ ರ್ಥಿಗಳು ಇವುಗಳಲ್ಲಿ ಭಾಗವಹಿಸಿ ಮುಂದಿನ ದಿನ 'ಗಳಲ್ಲಿ ಕೃಷಿ ಕ್ಷೇತ್ರದ ನಿರಂತರ ಬೆಳವಣಿಗೆಗೆ ಸಹಕಾ ರಿಯಾಗಬೇಕೆಂದು ಕರೆ ನೀಡಿದರು.

ಈ ವೇಳೆ ಅಂತರಾಷ್ಟ್ರೀಯ ಸಮ್ಮೇಳನದ ಆಯೋ ಜನಾ ಸಂಘಟಕರಾದ ಡಾ. ಜಾಗೃತಿ ಬಿ. ದೇಶಮಾನ್ಯ ಅವರು ಸಮಾರೋಪ ಸಮಾರಂಭದಲ್ಲಿ ಹಾಜರಿದ್ದ ಎಲ್ಲರನ್ನು ಸ್ವಾಗತಿಸಿ, ಸಮ್ಮೇಳನದಲ್ಲಿ ಕ್ರಿಯಾಶೀಲವಾಗಿ ಭಾಗವಹಿಸಿದ್ದ ಎಲ್ಲ ಸಮ್ಮೇಳನಾರ್ಥಿಗಳಿಗೆ ವಿಶ್ವವಿದ್ಯಾಲಯದ ಪರವಾಗಿ ಧನ್ಯವಾದಗಳನ್ನು ಅರ್ಪಿಸಿದರು. ಹಾಗೂ ಮುಂಬರುವ 2026ಕ್ಕೆ ಶುಭಕಾಮನೆಗಳನ್ನು ಕೋರಿದರು.

ಈ ವೇಳೆ ಕೃಷಿ ಅರ್ಥಶಾಸ್ತ್ರ ವಿಭಾಗದ ಪ್ರಾಧ್ಯಾಪಕರು ಮತ್ತು ಮುಖ್ಯಸ್ಥರಾದ ಡಾ.ಜಿ.ಬಿ. ಲೋಕೇಶ್ ಅವರು ಮೂರು ದಿನಗಳ ಅವಧಿಯ ಸಮ್ಮೇಳನದ ವರದಿಯನ್ನು ಮಂಡಿಸಿದರು.

ಕಾರ್ಯಕ್ರಮದಲ್ಲಿ ಉತ್ತಮ ರೀತಿಯಲ್ಲಿ ಸಂಶೋಧನಾ ಫಲಿತಾಂಶಗಳನ್ನು ಮಂಡಿಸಿದ ಹಾಗೂ ಉತ್ತಮ ರೀತಿಯಲ್ಲಿ ಭಿತ್ತಿಚಿತ್ರಗಳನ್ನು ಪ್ರದರ್ಶಿಸಿದ ಸಮ್ಮೇಳನಾರ್ಥಿಗಳಿಗೆ ಪ್ರಶಸ್ತಿಗಳನ್ನು ನೀಡಲಾಯಿತು.

ಇದೇ ಸಂದರ್ಭದಲ್ಲಿ ಕೃಷಿ ಅರ್ಥಶಾಸ್ತ್ರ ವಿಭಾಗದ ಸಹ ಪ್ರಾಧ್ಯಾಪಕರಾದ ಡಾ. ಸುರೇಶ್ ಅವರು ಸಮಾರೋಪ ಸಮಾರಂಭಕ್ಕೆ ವಂದಿಸಿದರು.

## ವಿಕಲಚೇತನರ ಸೇವೆಗೆ ಶಿವಕುಮಾರ್ ಚಲ್ಮಲ್‌ಗೆ ಜಿಲ್ಲಾ ಪ್ರಶಸ್ತಿ

ಸೇವೆ ಸಲ್ಲಿಸಿದ್ದಾರೆ. ಇವರ ಸೇವೆಯನ್ನು ಗುರುತಿಸಿ ಇಲಾಖೆಯ ವತಿಯಿಂದ ಜಿಲ್ಲಾ ಪ್ರಶಸ್ತಿಯಿಂದ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ ಭಜಂತ್ರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನಿರ್ದೇಶಕರಾದ ನವೀನಕುಮಾರ. ಯು, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಶ್ರೀದೇವಿ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಸಹ ಕಾರ್ಯದರ್ಶಿ ಡಾ. ದಂಡಪ್ಪ ಬಿರಾದಾರ್, ಎಂ.ಕೆ. ಭಂಡಾರಿ, ವ್ಯವಸ್ಥಾಪಕರಾದ ರಿಯೋಜ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಂಘ-ಸಂಸ್ಥೆಗಳ ಮುಖಂಡರು ಉಪಸ್ಥಿತರಿದ್ದರು.

ಈ ಗೌರವವು ಮಾನ್ವಿ ತಾಲ್ಲೂಕಿನ ವಿಕಲಚೇತನರಿಗೆ ಹಾಗೂ ಸಾಮಾಜಿಕ ಕಾರ್ಯಕರ್ತರಿಗೆ ಮತ್ತಷ್ಟು ಪ್ರೇರಣೆಯಾಗಿದ್ದು, ಮುಂದಿನ ದಿನಗಳಲ್ಲಿ ವಿಕಲಚೇತನರ ಸಬಲೀಕರಣಕ್ಕಾಗಿ ಇನ್ನಷ್ಟು ಬಲವಾಗಿ ಕೆಲಸ ಮಾಡುವುದಾಗಿ ಶಿವಕುಮಾರ್ ಚಲ್ಮಲ್ ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

## ಉತ್ತಮ ಆರೋಗ್ಯಕ್ಕಾಗಿ ವೈಯುಕ್ತಿಕವಾಗಿ ನದಿ ಪರಿಸರವನ್ನು ಮಾಲಿನ್ಯಗೊಳಿಸದಂತೆ ಜಾಗೃತರಾಗೋಣ: ಹಂಪಯ್ಯನಾಯಕ

ಸೈಯಾದ್ ಜೀಶನ್ ಖಾದ್ರಿ, ಸೈಯಾದ್ ಸಜ್ಜದ್ ಮತವಾಲೆ ವಹಿಸಿದರು. ಪ್ರೊ.ಶ್ರೀಪತಿ ಐ.ಐ.ಟಿ. ಹಾಗೂ ಆರ್ಥಿಕ ಸಲಹೆಗಾರರಾದ ಪ್ರೊ.ಕುಮಾರಸ್ವಾಮಿ ನದಿಯ ಉಳಿವಿನ ಕುರಿತು ಕೈಗೊಳ್ಳಬೇಕಾದ ಕ್ರಮಗಳ ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ದಕ್ಷಿಣ ಭಾರತ ಪ್ರಮುಖರಾದ ಮಾಧವನ್, ಗಾಯತ್ರಿ, ಮಾಜಿ ಶಾಸಕರಾದ ಬಸವನಗೌಡ ಬ್ಯಾಗವಾಟ, ರಾಜಾ ವೆಂಕಟಪ್ಪ ನಾಯಕ,ಗಂಗಾಧರನಾಯಕ, ಜಿಲ್ಲಾ ಸಂಚಾಲಕರಾದ ಎನ್. ಉದಯಕುಮಾರ ಸಾಹುಕಾರ,ತಾ.ಸಂಚಾಲಕರಾದ ಶ್ರೀಧರ ಸ್ವಾಮಿ, ಅನಿತಾನವಲಕಲ್, ಶರಣಪ್ಪಗೌಡ ನಕ್ಕುಂದಿ, ಜಗದೀಶ ಓತ್ತೂರ್, ಸೇರಿದಂತೆ ಪಟ್ಟಣದ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು, ವಿವಿಧ ಸಂಘ ಸಂಸ್ಥೆಗಳ ಮುಖಂಡರು ಭಾಗವಹಿಸಿದರು.

ಪಟ್ಟಣದ ಧ್ಯಾನ ಮಂದಿರದಿಂದ ಪ್ರಮುಖ ಬೀದಿಗಳಲ್ಲಿ ವೀರಗಾಸಿ ಕಲಾವಿದರು,ಡೋಳ್ಳು ಕುಣಿತ,ಸೇರಿದಂತೆ ವಿವಿಧ ಜನಪದ ಕಲಾವಿದರೊಂದಿಗೆ ಟಿ.ಎ.ಪಿ.ಸಿ.ಎಂ.ಎಸ್. ಬಯಲು ಜಾಗದ ವರೆಗೆ ನಡೆದ ನಿರ್ಮಾಲ ತುಂಗಭದ್ರ ಅಭಿಯಾನ ಜಲಜಾಗೃತಿ-ಜನಜಾಗೃತಿ ಪಾದಯಾತ್ರೆಯಲ್ಲಿ ಸಾವಿರಾರು ಜನರು ಭಾಗವಹಿಸಿದರು

## ಸಂಸದ ಸಾಗರ ಈಶ್ವರ್ ಖಂಡ್ರೆ ಹುಟ್ಟುಹಬ್ಬ: ಮ.ಮ.ಗ್ರಾ.ಅ ಸಂಸ್ಥೆಯಿಂದ ವೀಲ್ಚೇರ್ ವಿತರಣೆ



**ಬೀದರ್: ಜ.1-** ಲೋಕಸಭಾ ಸದಸ್ಯರಾದ ಸಾಗರ ಈಶ್ವರ್ ಖಂಡ್ರೆ ಅವರ 28ನೇ ಹುಟ್ಟುಹಬ್ಬದ ಅಂಗವಾಗಿ ಮಂಗಲಾ ಮಹಿಳಾ ಗ್ರಾಮೀಣ ಅಭಿವೃದ್ಧಿ ಸಂಸ್ಥೆ ವತಿಯಿಂದ ಅಂಗವಿಕಲರಿಗೆ ವೀಲ್ಚೇರ್ ವಿತರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಇದೇ ಸಂದರ್ಭದಲ್ಲಿ ಸಂಸ್ಥೆ ವತಿಯಿಂದ ಸಂಸದರಿಗೆ ಸನ್ಮಾನನೆರವೇರಿತು.

ಸನ್ಮಾನ ಸ್ವೀಕರಿಸಿ ಮಾತನಾಡಿರುವ ಸಾಗರ ಖಂಡ್ರೆ ಅವರು, ಸಮಾಜದಲ್ಲಿ ವಿಕಲಚೇತನರಿಗೆ ಸಹಕಾರ ಹಾಗೂ ಗೌರವಯುತ ಜೀವನ ಕಲ್ಪಿಸುವುದು ಪ್ರತಿಯೊಬ್ಬರ ಕರ್ತವ್ಯ. ಇಂತಹ ಸಾಮಾಜಿಕ ಸೇವಾ ಕಾರ್ಯಕ್ರಮಗಳು ಸಮಾಜದಲ್ಲಿ ಮಾನವೀಯ ಮೌಲ್ಯಗಳನ್ನು ಗಟ್ಟಿಗೊಳಿಸುತ್ತವೆ. ಈ ನಿಟ್ಟಿನಲ್ಲಿ ಮಹಿಳಾ ಮಂಡಳಿ ವತಿಯಿಂದ ಇಂತಹ ಸಾಮಾಜಿಕ ಕಳಕಳಿ ಕಾರ್ಯಕ್ರಮ ಹಮ್ಮಿಕೊಂಡಿರುವುದು ಶ್ಲಾಘನೀಯ ಎಂದು ಬಣ್ಣಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷೆ ಕು.ಮಂಗಲಾ ಮರಕಲೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಜೈ ಭಾರತ ಮಾತಾ ಸೇವಾ ಸಮಿತಿಯ ಅಧ್ಯಕ್ಷ ಪಪ್ಪು ಪಾಟೀಲ ಖಾನಾಪುರ, ಸಿದ್ದಗಂಗಾ ಶಿವಕುಮಾರ ಸ್ವಾಮಿ ಮಠದ ಹಳೆ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ ಶಿವಕುಮಾರ ಪಾಟೀಲ ತೆಗಂಪುರ, ಅಲಿಯಂಬರ ಗ್ರಾಮ ಪಂಚಾಯತ್ ಮಾಜಿ ಅಧ್ಯಕ್ಷ ರಿತೇಶ ಬೀರನಳ್ಳೆ ಯುವ ಮುಖಂಡ ಸಂಗಮೇಶ ಭಾವಿದೊಡ್ಡಿ, ಎಂಆರ್‌ಡಬ್ಲ್ಯು ಬಾಬುರಾವ ರಾಠೋಡ, ವಿಆರ್‌ಡಬ್ಲ್ಯು ತುಕಾರಾಮ, ಇತರೆ ಗಣ್ಯರಾದ ಬೀರಗೊಂಡ ಡೋಣೆ, ಸಂಗಮೇಶ ಧನ್ನೂರ, ಕಾಂಗ್ರೆಸ್ ಕಾರ್ಯಕರ್ತರು, ವಿಕಲಚೇತನರು, ಉದಯನಾಯಕ, ಕವಿತಾ ಡೋಣೆ, ಶ್ರೀಕಾಂತ ಡೋಣೆ, ರೇಖಾ, ಸುರೇಖಾ, ಲೋಕೇಶ ಹಜ್ಜರ್ಗಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಡಿ.ಇ.ಐ.ಸಿ. ವ್ಯವಸ್ಥಾಪಕರ ಹುದ್ದೆಗೆ ಅರ್ಜಿ ಆಹ್ವಾನ

**ರಾಯಚೂರು ಜ,1-** ಇಲ್ಲಿನ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ 2025-26ನೇ ಸಾಲಿಗೆ ಮಂಜೂರಾಗಿ ಖಾಲಿ ಇರುವ ಡಿ.ಇ.ಐ.ಸಿ. ವ್ಯವಸ್ಥಾಪಕರು-01 ಹುದ್ದೆಯನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ರಾಷ್ಟ್ರೀಯ ಆರೋಗ್ಯ ಅಭಿಯಾನದ ಮಾರ್ಗಸೂಚಿ ಹಾಗೂ ಷರತ್ತು ಮತ್ತು ನಿಬಂಧನೆಗಳಿಗೆ ಅನುಸಾರ ಹಾಗೂ ಈ ಹುದ್ದೆ ಜಿಲ್ಲೆಗೆ ಒಂದೇ ಇರುವುದರಿಂದ ಮೆರಿಟ್ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗುವುದು.

ವಿದ್ಯಾರ್ಹತೆ: ಭಾರತೀಯ ಪುನರ್ವಸತಿ ಮಂಡಳಿ ಅನುಮೋದಿಸಿದ ಅಂಗವೈಕಲ್ಯ ಪುನರ್ವಸತಿ ಆಡಳಿತದಲ್ಲಿ ಸ್ನಾತಕೋತ್ತರ ಪದವಿ ಅಥವಾ ಮಾನ್ಯತೆ ಪಡೆದ / ಪ್ರಸಿದ್ಧ ಸಂಸ್ಥೆಯಿಂದ ಆಸ್ಪತ್ರೆ/ ಆಸ್ಪತ್ರೆ ನಿರ್ವಹಣೆಯಲ್ಲಿ ಸ್ನಾತಕೋತ್ತರ ಪದವಿ/ ಡಿಪ್ಲೋಮಾ ಹೊಂದಿರುವವರಿಗೆ 1 ವರ್ಷದ ಅನುಭವ ಹೊಂದಿರಬೇಕು. ಅಥವಾ ಮಾನ್ಯತೆ ಪಡೆದ ಸಂಸ್ಥೆಯಿಂದ ಎಂ.ಬಿ.ಎ. ಆಸ್ಪತ್ರೆ ನಿರ್ವಹಣೆ/ ಆಡಳಿತ ಪದವಿ ಮತ್ತು ಆಸ್ಪತ್ರೆ/ ಆರೋಗ್ಯ ಕಾರ್ಯಕ್ರಮದಲ್ಲಿ 2 ವರ್ಷಗಳ ಅನುಭವವಿರಬೇಕು. ಹಾಗೂ ರಾಷ್ಟ್ರೀಯ ಆರೋಗ್ಯ ಅಭಿಯಾನ ಹಾಗೂ ಆರೋಗ್ಯ ಇಲಾಖೆಯಲ್ಲಿ ಸೇವೆ ಸಲ್ಲಿಸಿದ ಅನುಭವ ಹೊಂದಿದ್ದಲ್ಲಿ ಎಂ.ಬಿ.ಎ.ಪದವಿಯನ್ನು ಪರಿಗಣಿಸಲಾಗುವುದು.

ಆಸಕ್ತರು ಜನವರಿ 5ರ 10.30ಗಂಟೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಚೇರಿಯಲ್ಲಿ ನಡೆಯುವ ನೇರ ಸಂದರ್ಶನದಲ್ಲಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಯೋಜನಾ ನಿರ್ವಹಣಾ ಘಟಕ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯ ರಾಯಚೂರು ಅನ್ನು ಕಚೇರಿಯ ಅವಧಿಯಲ್ಲಿ ಭೇಟಿ ನೀಡಿ ಮಾಹಿತಿ ಪಡೆಯಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಕಲಚೇತನರಿಂದ ವಿವಿಧ ಸೌಲಭ್ಯಕ್ಕೆ ಅರ್ಜಿ ಆಹ್ವಾನ

**ರಾಯಚೂರು ಜ,1-** ರಾಯಚೂರು ಮಹಾನಗರಪಾಲಿಕೆ ವ್ಯಾಪ್ತಿ ಪ್ರದೇಶದಲ್ಲಿ ಬರುವ ವಿಕಲಚೇತನರ ಅರ್ಹ ಫಲಾನುಭವಿಗಳಿಂದ ವಿವಿಧ ಸೌಲಭ್ಯಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ವೈದ್ಯರಿಂದ ಪಡೆದ ಗುರುತಿನ ಚೀಟಿ/ಯು.ಡಿ.ಐ.ಡಿ ಕಾರ್ಡ್, ಆಧಾರ ಕಾರ್ಡ್, ಬಿ.ಪಿ.ಎಲ್ ರೇಷನ್ ಕಾರ್ಡ್, ಗುರುತಿನ ಚೀಟಿ, ಪಾಸ್ ಪೋರ್ಟೋ ಸೈಜ್ ಪೋಟೋ-1, ವಿಕಲಚೇತನರ 1 ಭಾವಚಿತ್ರದೊಂದಿಗೆ ಜನವರಿ 15 ರೊಳಗಾಗಿ ಕಚೇರಿಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕಚೇರಿ ನೋಟಿಸ್ ಬೋರ್ಡ್ ನೋಡಬಹುದಾಗಿದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಿಮ್ಸ್ ಸಂಸ್ಥೆಯಿಂದ ಅಲೈಡ್ ಹೆಲ್ತ್ ಸೈನ್ಸ್ ಕೋರ್ಸ್ ಸೀಟುಗಳ ಭರ್ತಿಗೆ ಅರ್ಜಿ ಆಹ್ವಾನ

**ರಾಯಚೂರು ಜ,1-** ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಿಂದ 2025-2026ನೇ ಸಾಲಿನಲ್ಲಿ ಕೆಇಎ ಮೂಲಕ ಎಲ್ಲಾ ಸುತ್ತಿನ ಸೀಟು ಹಂಚಿಕೆಯ ನಂತರ ಉಳಿಕೆಯಾಗಿರುವ ಅಲೈಡ್ ಹೆಲ್ತ್ ಸೈನ್ಸ್ ಕೋರ್ಸ್ಗಳ ಸೀಟುಗಳ ಭರ್ತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಬಿ.ಎಸ್ಸಿ ಅರವಳಿಕೆ ಮತ್ತು ಆಪರೇಷನ್ ಥಿಯೇಟರ್ ಟೆಕ್ನಾಲಜಿ 10, ಬಿ.ಎಸ್ಸಿ ತುರ್ತು ಮತ್ತು ಟ್ರಾಮಾಕೇರ್ ಟೆಕ್ನಾಲಜಿ 10, ಬಿ.ಎಸ್ಸಿ ಕಾರ್ಡಿಯಾಕ್ ಕೇರ್ ಟೆಕ್ನಾಲಜಿ 10, ಬಿ.ಎಸ್ಸಿ ವೈದ್ಯಕೀಯ ಇಮೇಜಿಂಗ್ ಟೆಕ್ನಾಲಜಿ 10, ಬಿ.ಎಸ್ಸಿ ವೈದ್ಯಕೀಯ ಪ್ರಯೋಗಾಲಯ ಟೆಕ್ನಾಲಜಿ 20, ಬಿ.ಎಸ್ಸಿ ಆಪ್ಟೋಮೆಟ್ರಿ 20, ಬಿ.ಎಸ್ಸಿ ಮೂತ್ರಪಿಂಡದ ಡಯಾಲಿಸಿಸ್ ಟೆಕ್ನಾಲಜಿ 10, ಬ್ಯಾಚುಲರ್ ಆಫ್ ಪಬ್ಲಿಕ್ ಹೆಲ್ತ್ 20 ಸೇರಿದಂತೆ ಒಟ್ಟು 110 ಸೀಟುಗಳು ಹೊಸದಾಗಿ ಮಂಜೂರಾಗಿದ್ದು, ಕರ್ನಾಟಕ ಪರಿಕ್ಷಾ ಪ್ರಾಧಿಕಾರದ ವತಿಯಿಂದ ಅಂತಿಮ ಸುತ್ತಿನ ಸೀಟುಗಳ ಹಂಚಿಕೆಯನ್ನು ವಾಕ್-ಇನ್ ಅಡ್ಮಿಷನ್ ಮೂಲಕ ಕೈಗೊಳ್ಳಲು ಬೆಂಗಳೂರಿನ ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದ ನಿರ್ದೇಶಕರು ಆದೇಶಿಸಿದ್ದು, ಈ ಆದೇಶದಂತೆ ಜನವರಿ 8ರ ಸಂಜೆ 4ಗಂಟೆಯೊಳಗಾಗಿ ಆಸಕ್ತ ಅಭ್ಯರ್ಥಿಗಳು ನೋಂದಣಿ ಮಾಡಿಕೊಳ್ಳಬಹುದಾಗಿದೆ.

ದಿನಾಂಕ 09.01.2026 ಬೆಳ್ಳಿಗ್ಗೆ 11 ಗಂಟೆ ನಂತರ ನೊಂದಾಯಿತ ಅಭ್ಯರ್ಥಿಗಳ ಮೆರಿಟ್ ಮತ್ತು ರೋಸ್ಟರ್ ಆಧಾರದ ಮೇಲೆ ಸೀಟು ಆಯ್ಕೆಮಾಡಿ ಆಯ್ಕೆಯಾದ ಅಭ್ಯರ್ಥಿಗಳ ಪಟ್ಟಿಯನ್ನು ರಿಮ್ಸ್ ವೈದ್ಯಕೀಯ ಮಹಾವಿದ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ನೋಡಲ್ ಅಧಿಕಾರಿ ಅನಿಲ ಕುಮಾರ ಮೊಬೈಲ್ ಸಂಖ್ಯೆ:8951772705ಗೆ ಸಂಪರ್ಕಿಸಬಹುದಾಗಿದೆ ಎಂದು ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರವಾಸಿ ಮಾರ್ಗದರ್ಶಿ ತರಬೇತಿಗೆ ಅರ್ಜಿ ಆಹ್ವಾನ

**ರಾಯಚೂರು ಜ,1-** ಪ್ರವಾಸೋದ್ಯಮ ಇಲಾಖೆಯಿಂದ 2024-25ನೇ ಸಾಲಿನ ಜಿಲ್ಲೆಯ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ ವಿದ್ಯಾವಂತ ನಿರುದ್ಯೋಗಿ ಅಭ್ಯರ್ಥಿಗಳಿಗೆ ಪ್ರವಾಸಿ ಮಾರ್ಗದರ್ಶಿ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ.

2024-25ನೇ ಸಾಲಿನಲ್ಲಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿ ಕಿತ್ತೂರು ಕರ್ನಾಟಕ ಹಾಗೂ ಕಲ್ಯಾಣ ಕರ್ನಾಟದ ಭಾಗದ 08 ಜಿಲ್ಲೆಗಳಲ್ಲಿ ಪ್ರವಾಸಿ ತಾಣಗಳನ್ನು ಉತ್ತೇಜಿಸಿ ಪ್ರಚಾರ ಪಡಿಸಲು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳಿಗೆ ಒಂದು ತಿಂಗಳ ಪ್ರವಾಸಿ ಮಾರ್ಗದರ್ಶಿ ತರಬೇತಿ ನೀಡಲು ಹಾಗೂ ಈ ತರಬೇತಿ ಪಡೆದ ಅಭ್ಯರ್ಥಿಗಳಿಗೆ ಜಾಕೆಟ್ ಹಾಗೂ ಒಂದು ಜೊತೆ ಸ್ಪೋರ್ಟ್ಸ್ ಶೂ ಒದಗಿಸುವ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಜಿಲ್ಲೆಗೆ ಸಂಬಂಧಿಸಿದಂತೆ ಪರಿಶಿಷ್ಟ ಜಾತಿ-11 ಹಾಗೂ ಪಂಗಡದ-09 ಗುರಿಯನ್ನು ನಿಗಧಿಪಡಿಸಲಾಗಿದ್ದು, ಪರಿಶಿಷ್ಟ ಜಾತಿ-10 ಹಾಗೂ ಪಂಗಡದ-08 ಗುರಿಗಳು ಬಾಕಿ ಉಳಿದಿರುತ್ತವೆ.ಪರಿಶಿಷ್ಟ ಜಾತಿ/ಪಂಗಡದ ಅಭ್ಯರ್ಥಿಗಳಿಗೆ ಕನಿಷ್ಠ 21 ವರ್ಷಗಳು ಹಾಗೂ ಗರಿಷ್ಠ 48 ವಯೋಮಿತಿಯೊಳಗಿರಬೇಕು. ಅರ್ಜಿಗಳನ್ನು ಕಚೇರಿಯಿಂದ ಪಡೆದು ಜನವರಿ 20ರೊಳಗಾಗಿ ಸಲ್ಲಿಸಬಹುದಾಗಿದೆ. ಅವಧಿ ಮುಂಗಿದ ನಂತರ ಬಂದ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಪ್ರವಾಸೋದ್ಯಮ ಇಲಾಖೆ, ಗಣೇಶ ಗುಡಿ ಹತ್ತಿರ, ನಿಜಲಿಂಗಪ್ಪ ಕಾಲೋನಿ, ರಾಯಚೂರು ಜಿಲ್ಲೆ-584101, ದೂರವಾಣಿ ಸಂಖ್ಯೆ:08532200677, ಕಚೇರಿಯ ವೇಳೆಯಲ್ಲಿ ಸಂಪರ್ಕ ಮಾಡಬಹುದಾಗಿದೆ ಎಂದು ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರಾದ ನಜೀರ ಅಮದ ಕನವಳ್ಳಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಹಾಯಧನಕ್ಕೆ ಅರ್ಜಿ ಸಲ್ಲಿಸಲು ಜನವರಿ 9ರವರೆಗೆ ಅವಧಿ ವಿಸ್ತರಣೆ

**ರಾಯಚೂರು,ಜ.1-**ರಾಜ್ಯಾದ್ಯಂತ ಹಾಗೂ ಹೊರರಾಜ್ಯಗಳಲ್ಲಿ ಕ್ರಿಯಾತ್ಮಕ ಸಾಂಸ್ಕೃತಿಕ ಚಟುವಟಿಕೆಗಳ ಮೂಲಕ ನಾಡಿನ ಭಾಷಾ ಸಂವರ್ಧನೆ, ಕಲೆ, ಸಾಹಿತ್ಯ, ಸಂಗೀತ, ಜಾನಪದ, ನೃತ್ಯ ಕಲಾಪ್ರಕಾರಗಳನ್ನು ಉಳಿಸಿ ಬೆಳೆಸುವ ಸಲುವಾಗಿ ಕಾರ್ಯನಿರ್ವಹಿಸುತ್ತಿರುವ ನೋಂದಾಯಿತ ಸಂಘ-ಸಂಸ್ಥೆಗಳಿಂದ ಸಹಾಯಧನಕ್ಕೆ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿಯ ಅವಧಿಯನ್ನು ಜನವರಿ 9ರವರೆಗೆ ವಿಸ್ತರಿಸಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಕಲಾವಿದರಿಗೆ ವಾದ್ಯ ಪರಿಕರ ಮತ್ತು ವೇಷಭೂಷಣಗಳ ಖರೀದಿಗೆ ಸಹಾಯಧನ ಹಾಗೂ ಚಿತ್ರಕಲೆ,ಶಿಲ್ಪ ಕಲಾಕೃತಿಗಳ ಪ್ರದರ್ಶನಕ್ಕೆ ಸಹಾಯಧನ ನೀಡಲು 2025-26ನೇ ಸಾಲಿನ ಸಾಮಾನ್ಯ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಉಪಯೋಜನೆಯಡಿ ಸೇವಾಸಿಂಧು ವಿಳಾಸ: Sevasindhu.karnataka. gov.in. ನಲ್ಲಿ ಜನವರಿ 9ರವರೆಗೆ ಅರ್ಜಿ ಸಲ್ಲಿಸಲು ಕಾಲಾವಕಾಶ ನೀಡಲಾಗಿದೆ. ನಿಗದಿತ ದಿನಾಂಕದ ನಂತರ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ, ಹಾಗೂ ಅರ್ಜಿಗಳನ್ನು ನೇರವಾಗಿ ಇಲಾಖೆಯಲ್ಲಿ ಸ್ವೀಕರಿಸುವುದಿಲ್ಲ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕನ್ನಡಿಗರಿಗೆ ಉದ್ಯೋಗ ಮಸೂದೆ ಸಿದ್ಧ

**ಬೆಂಗಳೂರು, ಜ. 1–** ಬಹಳ ದಿನಗಳಿಂದ ನೆನೆಗುದಿಗೆ ಬಿದ್ದಿದ್ದ ಖಾಸಗಿ ವಲಯಗಳಲ್ಲಿ ಕನ್ನಡಿಗರಿಗೆ ಉದ್ಯೋಗ ನೀಡುವ ಬೇಡಿಕೆ ಈಡೇರಿಸಲು ಸರ್ಕಾರ ಮುಂದಾಗಿದ್ದು, ಈ ಸಂಬಂಧ ಕಾನೂನನ್ನು ಜಾರಿ ಮಾಡಲು ಮುಂದಾಗಿದೆ.

ಈ ಹಿಂದೆಯೇ ಖಾಸಗಿ ವಲಯದಲ್ಲಿ ಕನ್ನಡಗರಿಗೆ ಉದ್ಯೋಗ ನೀಡುವ ವಿಧೇಯಕವನ್ನು ಸಿದ್ಧಪಡಿಸಲಾಗಿತ್ತಾದರೂ ತಾಂತ್ರಿಕ ಕಾರಣಗಳಿಂದ ಅದನ್ನು ತಡೆಹಿಡಿಯಲಾಗಿತ್ತು. ಈಗ ಮತ್ತೆ ಖಾಸಗಿ ವಲಯದಲ್ಲಿ ಕನ್ನಡಿಗರಿಗೆ ಉದ್ಯೋಗ ನೀಡುವ ಬೇಡಿಕೆ, ಒತ್ತಾಯಗಳಿಗೆ ಮಣಿದಿರುವ ರಾಜ್ಯ ಸರ್ಕಾರ, ಈ ಹಿಂದೆ ತಡೆ ಹಿಡಿಯಲಾಗಿದ್ದ ಕರ್ನಾಟಕ ರಾಜ್ಯ ಸ್ಥಳೀಯ ಅಭ್ಯರ್ಥಿಗಳ ಉದ್ಯೋಗ ವಿಧೇಯಕವನ್ನು ಜಾರಿಗೆ ತರಲು ಮುಂದಾಗಿದೆ.

ಕಳೆದ ವರ್ಷವೇ ಖಾಸಗಿ ವಲಯದಲ್ಲಿ ಉದ್ಯೋಗ ನೀಡುವ ವಿಧೇಯಕವನ್ನು ಸಿದ್ಧಪಡಿಸಲಾಗಿತ್ತು. ಕೆಲವು ಆಕ್ಷೇಪಣೆ, ಕಾನೂನು ತೊಡಕುಗಳ ಹಿನ್ನೆಲೆಯಲ್ಲಿ ಈ ವಿಧೇಯಕವನ್ನು ರಾಜ್ಯ ಸರ್ಕಾರ ಜಾರಿ ಮಾಡಲು ಆಗಿರಲಿಲ್ಲ. ಈಗ ಈ ವಿಧೇಯಕ ಜಾರಿ ಮಾಡಲು ಸರ್ಕಾರ ದೃಢ ಹೆಜ್ಜೆಗಳನ್ನು ಇಟ್ಟಿದ್ದು ನಾಳೆ ನಡೆಯುವ ಸಚಿವ ಸಂಪುಟ ಸಭೆಯಲ್ಲಿ ಖಾಸಗಿ ವಲಯದಲ್ಲೂ ಕನ್ನಡಿಗರಿಗೆ ಉದ್ಯೋಗ ಮೀಸಲಾತಿ ನೀಡುವ ವಿಧೇಯಕದ ಬಗ್ಗೆ ಚರ್ಚಿಸಿ ಒಪ್ಪುಗೆ ನೀಡವ ಸಾಧ್ಯತೆ ಇದೆ.

ನಾಳಿನ ಸಚಿವ ಸಂಪುಟದಲ್ಲಿ ಈ ವಿಧೇಯಕಕ್ಕೆ ಒಪ್ಪಿಗೆ ಸಿಗಲಿದ್ದು, ಮುಂದಿನ ವಿಧಾನಮಂಡಲದ ಅಧಿವೇಶದಲ್ಲಿ ಖಾಸಗಿ ವಲಯಗಳಲ್ಲಿ ಕನ್ನಡಿಗರಿಗೆ ಉದ್ಯೋಗ ಮೀಸಲಾತಿ ಕಲ್ಪಿಸುವ ವಿಧೇಯಕವನ್ನು ಮಂಡಿಸುವ ಸಾಧ್ಯತೆಗಳು ಇವೆ.

ಈ ವಿಧೇಯಕದಲ್ಲಿ ಖಾಸಗಿ ವಲಯದಲ್ಲಿ ಕನ್ನಡಗಿರಿಗೆ ಶೇ. 75 ಉದ್ಯೋಗ ಮೀಸಲಾತಿ ನೀಡುವ ಅಂಶಗಳಿದ್ದು, ಆಡಳಿತಾತ್ಮಕ ಹುದ್ದೆ ಇದರಲ್ಲಿ ಶೇ. 50 ಅಂದರೆ ತಾಂತ್ರಿಕ, ಕೌಶಲ್ಯ ಮತ್ತಿತರ ಉಗ್ಯೋದಗಳಲ್ಲಿ ಶೇ. 50 ರಷ್ಟು ಕನ್ನಡಿಗರಿಗೆ ಮೀಸಲಿರಬೇಕು. ಅದೇ ರೀತಿ ಆಡಳಿತೇತರ ಹುದ್ದೆ ಸಿ. ಗ್ರೂಪ್, ಡಿ ಗ್ರೂಪ್ ಅಂದರೆ ಗುಮಾಸ್ತ ಕೌಶಲ್ಯ ರಹಿತ ಶೇ. 75 ರಷ್ಟು ಕನ್ನಡಿಗರಿಗೆ ಮೀಸಲಿರಬೇಕು ಎಂಬ ಅಂಶಗಳಿವೆ.

ಈ ವಿಧೇಯಕ ಜಾರಿಯಾದ ನಂತರ ಖಾಸಗಿ ವಲಯದಲ್ಲಿ ಕನ್ನಡಗರಿಗೆ ಉದ್ಯೋಗ ಮೀಸಲಾತಿ ನೀಡದ ಸಂಸ್ಥೆಗಳು, ಉದ್ಯಮಗಳ ವಿರುದ್ಧ ಕಾನೂನು ಕ್ರಮಕ್ಕೂ ಅವಕಾಶ ಕಲ್ಪಿಸಲಾಗಿದ್ದು, ಮೀಸಲಾತಿ ನಿಯಮ ಉಲ್ಲಂಘಿಸಿದರೆ ದಂಡ ವಿಧಿಸಲು ಕಾಯ್ದೆಯಲ್ಲಿ ಅವಕಾಶವಿದೆ.

ಕರ್ನಾಟಕದಲ್ಲಿ ಹುಟ್ಟಿರುವವರು ಅಥವಾ ಕರ್ನಾಟಕದಲ್ಲಿ 15 ವರ್ಷ ವಾಸ ಇರುವವರು ಕನ್ನಡ ಓದಲು, ಬರೆಯಲು ಮಾತನಾಡಲು ಬರುವವರನ್ನು ಕನ್ನಡಿಗರು ಎಂದು ಪರಿಗಣಿಸಿ ಅವರಿಗೆ ಖಾಸಗಿ ವಲಯದಲ್ಲೂ ಮೀಸಲಾತಿ ನೀಡುವ ವಿಧೇಯಕವನ್ನು ಸಿದ್ಧಪಡಿಸಲಾಗಿದೆ. ಒಂದು ವೇಳೆ ಕರ್ನಾಟಕದಲ್ಲಿ 15 ವರ್ಷ ವಾಸವಿದ್ದು ಕನ್ನಡ ಓದಲು , ಬರೆಯಲು ಬರದಿದ್ದರೆ ನೋಡಲ್ ಏಜೆನ್ಸಿ ನಡೆಸುವ ಕನ್ನಡ ಪರೀಕ್ಷೆಯಲ್ಲಿ ಉತ್ತೀರ್ಣರಾದರೆ ಈ ಕಾಯ್ದೆಯಲ್ಲಿ ಕಡ್ಡಾಯ ಮಾಡಲಾಗಿದೆ.ಕಳೆದ ಜುಲೈನಲ್ಲೇ ಈ ಕಾಯ್ದೆ ಜಾರಿಗೆ ಸರ್ಕಾರ ಸಿದ್ಧವಿತ್ತಾದರೂ ತಾಂತ್ರಿಕ ಕಾರಣದಿಂದ ವಿಧೇಯಕವನ್ನು ತಡೆಹಿಡಿಯಲಾಗಿತ್ತು. ಈಗ ತಾಂತ್ರಿಕ ಕಾರಣ, ಮುಂದೆ ಎದುರಾಗುವ ಕಾನೂನು ತೊಡಕು ಎಲ್ಲವನ್ನೂ ಸರಿಪಡಿಸಿಕೊಂಡು ವಿಧೇಯಕ ಸಿದ್ಧಗೊಂಡಿದೆ. ನಾಳಿನ ಸಚಿವ ಸಂಪುಟದಲ್ಲಿ ಈ ವಿಧೇಯಕ ಮಂಡನೆಯಾಗುವ ಸಾಧ್ಯತೆ




ಇದ್ದು, ಸಂಪುಟದ ಒಪ್ಪಿಗೆ ಪಡೆದ ನಂತರ ವಿಧಾನಮಂಡಲದ ಅಧಿವೇಶನದಲ್ಲಿ ಈ ವಿಧೇಯಕವನ್ನು ಮಂಡಿಸಿ ಒಪ್ಪಿಗೆ ಪಡೆಯಲು ಸರ್ಕಾರ ತಯಾರಿ ನಡೆಸಿದೆ.

ಈ ವಿಧೇಯಕ ಜಾರಿಯಾದರೆ ರಾಜ್ಯದಲ್ಲಿ ಖಾಸಗಿ ವಲಯದಲ್ಲೂ ಕನ್ನಡಿಗರಿಗೆ ಉದ್ಯೋಗವಕಾಶದ ಲಭ್ಯತೆ ಜತೆಗೆ ಖಾಸಗಿ ವಲಯದಲ್ಲಿ ಕನ್ನಡಿಗರಿಗೆ ಉದ್ಯೋಗ ನೀಡುತ್ತಿಲ್ಲ ಎಂಬ ದೂರುಗಳು ಕಡಿಮೆಯಾಗಲಿದೆ.

## ಮೈಸೂರಿನಲ್ಲಿ ಕಾನೂನು ವಿವಿ ಕಚೇರಿ ಆರಂಭಕ್ಕೆ ಗೂಳಿಗೌಡ ಒತ್ತಾಯ

**ಬೆಂಗಳೂರು ಜ. 1–** ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಪ್ರಾದೇಶಿಕ ಕಚೇರಿಯನ್ನು ಮೈಸೂರಿನಲ್ಲಿ ಸ್ಥಾಪಿಸುವಂತೆ ವಿಧಾನ ಪರಿಷತ್ ಸದಸ್ಯ ಗ್ಯಾರಂಟಿ ಅನುಷ್ಠಾನ ಸಮಿತಿ ಉಪಾಧ್ಯಕ್ಷ ಹಾಗೂ ಕಾನೂನು ವಿಶ್ವವಿದ್ಯಾಲಯದ ಸಲಹಾ ಮಂಡಳಿ ಸದಸ್ಯ ದಿನೇಶ್ ಗೂಳಿಗೌಡ ಒತ್ತಾಯಿಸಿದ್ದಾರೆ.



ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹೋಮು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹಾಗೂ ಕಾನೂನು ಸಚಿವ ಎಚ್ ಕೆ ಪಾಟೀಲ್ ಇವರುಗಳಿಗೆ ಪತ್ರ ಬರೆದಿರುವ ಅವರು ಹುಬ್ಬಳ್ಳಿಯಲ್ಲಿ ಕೇಂದ್ರ ಕಚೇರಿಯನ್ನು ಹೊಂದಿರುವ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ರಾಜ್ಯಾದ್ಯಂತ 176 ಕಾನೂನು ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ. ಈ ಕಾಲೇಜುಗಳಲ್ಲಿ ಒಟ್ಟಾರೆಯಾಗಿ ಮೂವತ್ತು ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಮೂರು ವರ್ಷಗಳ ಹಾಗೂ ಐದು ವರ್ಷಗಳ ಅವಧಿಯ ಪಠ್ಯಕ್ರಮದಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದಾರೆ. ಈ ಪೈಕಿ ಸುಮಾರು ಅರ್ಧದಷ್ಟು ಕಾಲೇಜುಗಳು ಮೈಸೂರು, ಬೆಂಗಳೂರು, ಮಂಡ್ಯ, ಹಾಸನ ಮತ್ತು ಚಾಮರಾಜನಗರ ಸೇರಿದಂತೆ ಹಳೆ ಮೈಸೂರು ಪ್ರಾಂತ್ಯದ ಭಾಗದಲ್ಲಿಯೇ ಇವೆ.

ಪ್ರಸ್ತುತ ಈ ಭಾಗದ ಸುಮಾರು ಶೇಕಡ 50ಕ್ಕೂ ಹೆಚ್ಚು ವಿದ್ಯಾರ್ಥಿಗಳು ಈ ಭಾಗದವರೇ ಆಗಿದ್ದಾರೆ. ಇವರೆಲ್ಲರೂ ತಮ್ಮ ಶೈಕ್ಷಣಿಕ ದಾಖಲಾತಿ, ಅಂಕಪಟ್ಟಿ ಅಥವಾ ಇತರೆ ಆಡಳಿತಾತ್ಮಕ ಕೆಲಸಗಳಿಗಾಗಿ ಪ್ರತಿ ಬಾರಿಯೂ ದೂರದ ಹುಬ್ಬಳ್ಳಿಗೆ ಪ್ರಯಾಣಿಸಬೇಕಾದ ಅನಿವಾರ್ಯತೆ ಇದೆ. ಇದು ವಿದ್ಯಾರ್ಥಿಗಳಿಗೆ ಆರ್ಥಿಕವಾಗಿ ಹೊರೆಯಾಗುವುದಲ್ಲದೆ, ಸಮಯದ ವ್ಯಯಕ್ಕೂ ಕಾರಣವಾಗುತ್ತಿದೆ. ಎಂದು ತಿಳಿಸಿದ್ದಾರೆ.

ವಿದ್ಯಾರ್ಥಿಗಳಿಗೆ ಉಂಟಾಗುತ್ತಿರುವ ಆರ್ಥಿಕ ಹೊರೆ ಹಾಗೂ ಸಮಯದ ವ್ಯರ್ಥವನ್ನ ತಪ್ಪಿಸಲು ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಒಂದು ಪ್ರಾದೇಶಿಕ ವಲಯ ಕಚೇರಿಯನ್ನು ಶೈಕ್ಷಣಿಕ ಕಾಶಿಯೆಂದು ಹೆಸರಾಗಿರುವ ಮೈಸೂರಿನಲ್ಲಿ ಸ್ಥಾಪಿಸುವುದು ಸೂಕ್ತವೆಂದು ಕಂಡುಬರುತ್ತಿದೆ. ಇದರಿಂದ ಈ ಭಾಗದ ಸಾವಿರಾರು ವಿದ್ಯಾರ್ಥಿಗಳಿಗೆ ಮತ್ತು ಕಾನೂನು ಕಾಲೇಜುಗಳ ಆಡಳಿತ ಮಂಡಳಿಗೂ ಅನುಕೂಲವಾಗಲಿದೆ.

ಆದ್ದರಿಂದ, ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಹಾಗೂ ಸರಳ ಆಡಳಿತಾತ್ಮಕ ಕ್ರಮಕ್ಕಾಗಿ ಮೈಸೂರು ನಗರದಲ್ಲಿ ಕಾನೂನು ವಿಶ್ವವಿದ್ಯಾಲಯದ ಪ್ರಾದೇಶಿಕ ಕಚೇರಿಯನ್ನು ಶೀಘ್ರವಾಗಿ ಆರಂಭಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಅವರು ಮನವಿ ಮಾಡಿದ್ದಾರೆ.

## ಮರ್ಯಾದೆಗೇಡು ಹತ್ಯೆ ತಡೆಗೆ ಪ್ರತ್ಯೇಕ ಕಾಯ್ದೆ ಚಿಂತನೆ

**ಹುಬ್ಬಳ್ಳಿ,ಜ.1:** ಮರ್ಯಾದೆ ಗೇಡು ಹತ್ಯೆ ತಡೆಗೆ ಮಾನ್ಯಾ ಹೆಸರಿನಲ್ಲಿ ಪ್ರತ್ಯೇಕ ಕಾಯ್ದೆ ತರುವ ಬಗ್ಗೆ ಚಿಂತನೆ ನಡೆಸಲಾಗುವುದು ಎಂದು ರಾಜ್ಯ ಸಮಾಜ ಕಲ್ಯಾಣ ಖಾತೆ ಸಚಿವ ಹೆಚ್.ಸಿ. ಮಹದೇವಪ್ಪ ಹೇಳಿದರು.

ಇನಾಂ ವೀರಾಪುರ ಗ್ರಾಮದಲ್ಲಿ ನಡೆದ ಮಾನ್ಯಾ ಮರ್ಯಾದೆ ಹತ್ಯೆ ಪ್ರಕರಣದ ಹಿನ್ನೆಲೆ ಇಂದು ಗ್ರಾಮಕ್ಕೆ ಭೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವನ ಹೇಳಿ, ಪರಿಹಾರದ ಚೆಕ್ ವಿತರಿಸಿ ಬಳಿಕ ಮಾಧ್ಯಮದವರೊಂದಿಗೆ ಅವರು ಮಾತನಾಡಿದರು.

ಈಗಾಗಲೇ ಅನ್ಯಾಯಕ್ಕೆ ಒಳಗಾದ ಕುಟುಂಬಕ್ಕೆ ಪರಿಹಾರದ ಚೆಕ್ ಅನ್ನು ನೀಡಲಾಗಿದೆ. ಪ್ರಕರಣದಲ್ಲಿ ಭಾಗಿಯಾಗಿದವರ ವಿರುದ್ಧ ಸರ್ಕಾರ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲಿದೆ ಎಂದರು.

ಸಂತ್ರಸ್ಥ ಕುಟುಂಬಕ್ಕೆ ಧೈರ್ಯ ಮತ್ತು ಸಾಂತ್ವನ ಹೇಳುವಂತೆ ಜಿಲ್ಲಾಡಳಿತಕ್ಕೆ ಸೂಚನೆ ನೀಡಲಾಗಿದೆ. ಕುಟುಂಬಕ್ಕೆ ಅಗತ್ಯ ನೆರವು ನೀಡಲಾಗುವುದು. ರಾಜ್ಯದಲ್ಲಿ ಇಂತಹ ಘಟನೆಗಳು ನಡೆಯದಂತೆ



ಮುನ್ನೆಚ್ಚರಿಕೆ ಕ್ರಮವಾಗಿ ಏನು ಕ್ರಮ ಕೈಗೊಳ್ಳಬೇಕೆಂಬ ಬಗ್ಗೆ ಸಿಎಂ, ಗೃಹ ಸಚಿವರೊಂದಿಗೆ ಚರ್ಚಿಸಿ ತಿರ್ವಾನ ಕೈಗೊಳ್ಳಲಾಗುವುದು ಎಂದರು.

## ಶಾಂತಿ ಮಾತುಕತೆ ಬೆನ್ನಲ್ಲೇ, ಪುಟಿನ್ ನಿವಾಸದ ಮೇಲೆ ಉಕ್ರೇನ್ ಡ್ರೋನ್ ದಾಳಿ

**ಮಾಸ್ಕೊ, ಜ.1–** ರಷ್ಯಾ ಉಕ್ರೇನ್ ನಡುವೆ ನಡೆಯುತ್ತಿರುವ ಯುದ್ಧವನ್ನು ನಿಲ್ಲಿಸಲು ಅಮೆರಿಕಾ ಶಾಂತಿ ಮಾತುಕತೆ ನಡೆಸಿರುವ ನಡುವೆ ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ನಿವಾಸದ ಮೇಲೆ ಉಕ್ರೇನ್ ಡ್ರೋನ್ ದಾಳಿ ನಡೆಸಿದ್ದು ಶಾಂತಿ ಮಾತುಕತೆಗೆ ಅಡ್ಡಿಯಾಗುವ ಲಕ್ಷಣಗಳು ಗೋಚರಿಸಿವೆ.

ಉಕ್ರೇನ್ ಡ್ರೋನ್‌ಗಳ ಮೂಲಕ ದಾಳಿ ಮಾಡಿದ್ದು, ರಷ್ಯಾ ಮತ್ತು ಕ್ರೈಮಿಯಾದ ಹಲವಾರು ಭಾಗಗಳಿಗೆ ಅಪ್ಪಳಿಸಿದೆ ಎಂದು ರಷ್ಯಾ ಆರೋಪಿಸಿತ್ತು, ಇದರ ಬೆನ್ನಲ್ಲೇ, ಅಧ್ಯಕ್ಷ ಪ್ಲಾಡಿಮಿರ್ ಪುಟಿನ್ ಅವರ ನಿವಾಸದ ಮೇಲೆ ಉಕ್ರೇನ್ ಪದೇ ಪದೇ ದಾಳಿ ನಡೆಸಿದೆ ಎನ್ನಲಾದ ವಿಡಿಯೊ ಬಿಡುಗಡೆ ಮಾಡಿದೆ.

ಕ್ರೆಮಿನ್ ಬಿಡುಗಡೆ ಮಾಡಿದ ಮತ್ತೊಂದು ವಿಡಿಯೊದಲ್ಲಿ, ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರ ನಿವಾಸದ ಮೇಲಿನ ದಾಳಿಯಲ್ಲಿ ಬಳಸಲಾದ ಮತ್ತು ರಷ್ಯಾ ಹೊಡೆದು ಉರುಳಿಸಿರುವ ಡೋನ್ ಒಂದು 6 ಕೆ.ಜಿ ಸ್ಫೋಟಕ ಹೊತ್ತಿರುವುದನ್ನು ತೋರಿಸಲಾಗಿದೆ. ಇದರಿಂದ ಬಿಗುವಿನ ವಾತಾವರಣ ನಿರ್ಮಾಣವಾಗಿದೆ.

ಹೊಸ ವರ್ಷದ ಮುನ್ನಾ ದಿನದಂದು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರ ನಿವಾಸದ ಮೇಲೆ ನಡೆದ ದಾಳಿ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಸಹ ಕಳವಳ ವ್ಯಕ್ತಪಡಿಸಿದ್ದರು. ಈ ಪ್ರದೇಶದಲ್ಲಿ ಶಾಂತಿ ನೆಲೆಸಲು ನಡೆಯುತ್ತಿರುವ ಪ್ರಯತ್ನಗಳ ಮೇಲೆ ಎಲ್ಲರೂ ಗಮನಹರಿಸಬೇಕೆಂದು ಒತ್ತಾಯಿಸಿದ್ದರು.

'ರಷ್ಯಾದ ಅಧ್ಯಕ್ಷರ ನಿವಾಸವನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಿರುವ ವರದಿಗಳನ್ನು ಕೇಳಿ ತೀವ್ರ ಕಳವಳಗೊಂಡಿದ್ದೇನೆ. ನಡೆಯುತ್ತಿರುವ ರಾಜತಾಂತ್ರಿಕ ಪ್ರಯತ್ನಗಳು ಯುದ್ಧವನ್ನು ಕೊನೆಗೊಳಿಸಲು ಮತ್ತು ಶಾಂತಿಯನ್ನು ಸಾಧಿಸಲು ಅತ್ಯಂತ ಕಾರ್ಯಸಾಧ್ಯವಾದ ಮಾರ್ಗವನ್ನು ನೀಡುತ್ತವೆ. ಈ ಪ್ರಯತ್ನಗಳ ಮೇಲೆ ಗಮನಹರಿಸಲು ಮತ್ತು ಅವುಗಳನ್ನು ದುರ್ಬಲಗೊಳಿಸುವ ಯಾವುದೇ ಕ್ರಮಗಳನ್ನು ತಪ್ಪಿಸಲು ನಾವು ಸಂಬಂಧಪಟ್ಟ ಎಲ್ಲರನ್ನೂ ಒತ್ತಾಯಿಸುತ್ತೇವೆ' ಎಂದು ಹೇಳಿದ್ದಾರೆ.' ಅಲ್ಲಗಳೆದ ಯುರೋಪ್ ಒಕ್ಕೂಟ–ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್



ಖಾಸಗಿ ನಿವಾಸ ಸೇರಿದಂತೆ ರಷ್ಯಾದ ಸರ್ಕಾರಿ ತಾಣಗಳ ಮೇಲೆ ಉಕ್ರೇನ್ ದಾಳಿ ನಡೆಸಿದೆ ಎನ್ನುವ ರಷ್ಯಾದ ಹೇಳಿಕೆಯನ್ನು ಯುರೋಪಿಯನ್ ಒಕ್ಕೂಟದ ಉನ್ನತ ರಾಜತಾಂತ್ರಿಕ ಅಧಿಕಾರಿ ಕಾಜಾ ಕಲ್ಲಾಸ್ ನಿರಾಕರಿಸಿದ್ದಾರೆ.ಉಕ್ರೇನ್ ರಷ್ಯಾದ ಸರ್ಕಾರಿ ತಾಣಗಳನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಲಾಗಿದೆ ಎನ್ನುವ ಅರ್ಥವಿಲ್ಲದ ಆರೋಪವನ್ನು ರಷ್ಯಾ ಮಾಡುತ್ತಿದೆ. ಈ ರೀತಿ ಹೇಳಿಕೆ ನೀಡುವ ಮೂಲಕ ಶಾಂತಿ ಒಪ್ಪಂದವನ್ನು ಹಳಿ ತಪ್ಪಿಸುವ ಪ್ರಯತ್ನ ಮಾಡಲಾಗುತ್ತಿದೆ ಇದು ಸರಿಯಲ್ಲ ಎಂದು ಹೇಳಿದ್ದಾರೆ.

ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಕಾಜಾ ಕಲ್ಲಾಸ್ ಅವರು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರ ನಿವಾಸದ ಮೇಲೆ ಉಕ್ರೇನ್ ದಾಳಿ ನಡೆಸಿದೆ ಎನ್ನುವ ಆರೋಪ ಸತ್ಯಕ್ಕೆ ದೂರವಾದುದು, ಈ ರೀತಿಯ ಹೇಳಿಕೆಗಳು ಉಭಯ ದೇಶಗಳ ನಡುವೆ ಗೊಂದಲ ಮೂಡಿಸುತ್ತವೆ ಎಂದಿದ್ದಾರೆ.

"ಉಕ್ರೇನ್‌ನ ಮೂಲಸೌಕರ್ಯ ಮತ್ತು ನಾಗರಿಕರನ್ನು ವಿವೇಚನೆಯಿಲ್ಲದೆ ಗುರಿಯಾಗಿಸಿಕೊಂಡಿರುವ ಆಕ್ರಮಣಕಾರರಿಂದ ಯಾರೂ ಆಧಾರರಹಿತ ಹಕ್ಕುಗಳನ್ನು ಸ್ವೀಕರಿಸಬಾರದು" ಎಂದು ರಷ್ಯಾಗೆ ತಿರುಗೇಟು ನೀಡಿದ್ದಾರೆ.

ಈ ವಾರದ ಆರಂಭದಲ್ಲಿ ರಷ್ಯಾ ವಾಯುವ್ಯ ರಷ್ಯಾದ ವಾಲ್ಡೈ ಸರೋವರದಲ್ಲಿರುವ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರ ಖಾಸಗಿ ಮನೆಯನ್ನು ಗುರಿಯಾಗಿಸಿಕೊಂಡು ಉಕ್ರೇನ್ ದಾಳಿ ನಡೆಸಲಾಗಿದೆ ಎನ್ನುವ ಆರೋಪ ಮಾಡಿದೆ. ರಷ್ಯಾ ವಿದೇಶಾಂಗ ಸಚಿವ ಸೆರ್ಗೆಯ್ ಲಾವ್ರೊವ್ ಅವರು

## ಅಭಿಷೇಕ್ ನ ಬಾಳಿಗೆ ಬೆಳಕಾದ ಬಸವೇಶ್ವರ ಆಸ್ಪತ್ರೆ



**ಕಲಬುರ್ಗಿ:ಜ.1:** 23ವರ್ಷದ ಅಭಿಷೇಕ್ ಎಂಬ ಕಲಬುರಗಿಯ ಆದರ್ಶ ನಗರದ ಯುವಕ ರಸ್ತೆ ಅಪಘಾತದಲ್ಲಿ ತಲೆಗೆ ಗಂಭೀರ ಗಾಯ ಹಾಗೂ ಇತರ ಅಂಗಾಂಗಗಳಿಗೆ ಗಾಯಗಳಾಗಿ,ನಗರದ ಪ್ರತೀಷ್ಠಿತ ಆಸ್ಪತ್ರೇಗೆ ದಾಖಲಾಗಿದ್ದ ಆದರೆ ಅವನು ಅಲ್ಲಿ ಗುಣಮುಖನಾಗದೆ ನಂತರ ಹೆಚ್ಚಿನ ಚಿಕಿತ್ಸೆಗಾಗಿ ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯು ಬಸವೇಶ್ವರ ಆಸ್ಪತ್ರೆಗೆ ಇಂಟ್ಯೂಬೇಟೆಡ್ ಸ್ಥಿತಿಯಲ್ಲಿಯೆ ಅವನನ್ನು ಅವನ ಸಂಬಂಧಿಕರು ದಾಖಲಿಸಿದರು.

ಆತ ಬಸವೇಶ್ವರ ಆಸ್ಪತ್ರೆಗೆ ದಾಖಲಾಗುವ ಸಮಯದಲ್ಲಿ ಖಾಸಗಿ ಆಸ್ಪತ್ರೆಯಿಂದ ವೆಂಟಿಲೇಟರ್ ಸಹಾಯದಿಂದಲೆ ತರಲಾಯಿತು ಇಲ್ಲಿ ಇವರನ್ನು ಪರೀಕ್ಷೆ ಮಾಡಿದಾಗ ಕೋಮಾ ಸ್ಕೇಲ್ (ಉಅಖ) 5 ಆಗಿರುವದು ದೃಢವಾಯಿತು ತಕ್ಷಣ ಆಸ್ಪತ್ರೆಯ ತಜ್ಞ ವೈದ್ಯರು ಸೇರಿ ವೆಂಟಿಲೇಟರ ಸಹಾಯದಿಂದಲೆ ಚಿಕಿತ್ಸೆ ಮುಂದುವರೆಸಿದರು. ನಂತರ ಮೆದುಳಿನ ಒಖಖ ಮಾಡಲಾಯಿತು ಅದರಲ್ಲಿ ಗ್ರೇಡ್ 2 ಡಿಫ್ಯೂಸ್ ಆಕ್ಸೋನಲ್ ಇಂಜುರಿ, ಎರಡೂ ಮುಂಭಾಗದ (ಫ್ರಂಟಲ್) ಮತ್ತು ಬಲ ಟೆಂಪೊರಲ್ ಭಾಗದಲ್ಲಿ ವಾಸೋಜೆನಿಕ್ ಈಡಿಮಾ ಜೊತೆಯಾದ ತೀವ್ರ ಇಂಟ್ರಾಪಾರೆಂಕೈಮಲ್ ಕಂಟ್ಯೂಷನ್, ಜೊತೆಗೆ ಸಬ್ಡ್ಯುರಲ್ ಹೆಮರೇಜ್ ಕಂಡುಬಂದಿತು. ಇಂತಹ ಸ್ಥಿತಿಗಳಲ್ಲಿ ಮರಣದ ಪ್ರಮಾಣವು 5–17% ವರೆಗೆ ಇರುತ್ತದೆ.ಇಂತಹ ಸಂದರ್ಭದಲ್ಲಿ ವಿಳಂಬವಿಲ್ಲದೆ ಚಿಕಿತ್ಸೆ ನೀಡಿದಲ್ಲಿ ರೋಗಿಯ ಜೀವ ಉಳಿಯುವ ಪ್ರಮಾಣವು 90% ಕ್ಕಿಂತ ಹೆಚ್ಚು ಇರುತ್ತದೆ.ಆಸ್ಪತ್ರೆಯ ವೈದ್ಯರ ತಂಡ ರೋಗಿಯನ್ನು ಐಸಿಯು ನಲ್ಲಿ ದಾಖಲಿಸಿ ಚಿಕಿತ್ಸೆ ಮುಂದುವರಿಸಲಾಯಿತು. ಡಿಫ್ಯೂಸ್ ಆಕ್ಸೋನಲ್ ಇಂಜುರಿ ಮತ್ತು ಸಬ್ಡ್ಯುರಲ್ ಹೆಮರೇಜ್ ನಿರ್ವಹಣೆಗೆ ಮೆದುಳು ರಕ್ಷಣಾತ್ಮಕ ಕ್ರಮಗಳು, ಆಕ್ರಮಣಕಾರಿ ಮಾನಿಟರಿಂಗ್ ಹಾಗೂ ಹೀಮೋಡೈನಾಮಿಕ್ ಸ್ಥಿರೀಕರಣ ಮಾಡಲಾಯಿತು. ಚಿಕಿತ್ಸೆಗೆ ಮಾರ್ಗದರ್ಶನ ನೀಡಲು ಕ್ರಮಬದ್ಧ ಲ್ಯಾಬೊರೇಟರಿ ಪರೀಕ್ಷೆಗಳು ಮತ್ತು ಮೆದುಳಿನ ಅಖಿ ಸ್ಕ್ಯಾನ್‌ಗಳನ್ನು ಬಳಸಲಾಯಿತು.ಈ ಎಲ್ಲ ಚಿಕಿತ್ಸೆಗಳಿಗೆ ಸರಿಯಾಗಿ ಸ್ಪಂದಿಸಿದ ರೋಗಿಯ ಸ್ಥಿತಿ ಕ್ರಮೇಣ ಸುಧಾರಿಸಿಕೊಂಡು, ಡಿಫ್ಯೂಸ್ ಆಕ್ಸೋನಲ್ ಇಂಜುರಿ ಮತ್ತು ರಕ್ತಸ್ರಾವದ ಅಂಶಗಳಲ್ಲಿ ಹಾಗೂ ಮೆದುಳಿನ ಕಾರ್ಯಕ್ಷಮತೆಯಲ್ಲಿ ಸಾಮಾನ್ಯೀಕರಣ ಕಂಡುಬಂದಿತು. ನಂತರ ರೋಗಿಯನ್ನು ವೆಂಟಿಲೇಟರ ಸಹಾಯದಿಂದ ಹೊರತರಲಾಯಿತು.

ಈ ಅತ್ಯಂತ ಅಪಾಯಕಾರಿ ಸ್ಥಿತಿಯಲ್ಲಿರುವ ರೋಗಿಗೆ ಯಶಸ್ವಿ ಚಿಕಿತ್ಸೆ ನೀಡಲು ಕಾರಣವಾಗಿದ್ದು ಆಸ್ಪತ್ರೆಯ ನ್ಯೋರೋಸರ್ಜಿಕಲ್ ವಿಭಾಗ, ಕ್ರೀಟಿಕಲ್ ಕೇರ್ ವಿಭಾಗ ಹಾಗೂ ತೀವ್ರ ನಿಗಾ ಘಟಕದ ಸಮಯಕ್ಕೆ ಸರಿಯಾದ ಸಮನ್ವಯತೆ ಕಾರಣವಾಯಿತು ಈಗ ರೋಗಿಯು ಸಂಪೂರ್ಣ ಗುಣಮುಖನಾಗಿ ಆಸ್ಪತ್ರೆಯಿಂದ ಬಿಡುಗಡೆಯಾಗಿದ್ದಾನೆ

ಈ ಯಶಸ್ವಿ ಚಿಕಿತ್ಸೆ ತಂಡದಲ್ಲಿ ನ್ಯೂರೋಸರ್ಜರಿ ತಂಡ:ಡಾ. ಆದಿಲ್ ಅಹ್ಮದ್ ಕರ್ನೂಲ್ (ಪ್ರಾಧ್ಯಾಪಕರು ಮತ್ತು ವಿಭಾಗದ ಮುಖ್ಯಸ್ಥರು), ಡಾ. ಚಾಣಕ್ಯ, ಡಾ. ರತ್ನದೀಪ್.

ತೀವ್ರ ನಿಗಾ ಘಟಕ (ಖಅಗ) ತಂಡ:ಡಾ. ಸೋಹೈಲ್ ಶಾಲಿ, ಡಾ. ಸತೀಶ್, ಡಾ. ಪ್ರತೀಕ್, ಡಾ. ನಿತಿನ್, ಡಾ. ಅಮಿತ್ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳು ಮತ್ತು ನಸಿರ್ಂಗ್ ತಂಡ ಭಾಗವಹಿಸಿತ್ತು ಇವರ ಯಶಸ್ವಿ ಕಾರ್ಯಕ್ಕೆ ಸಂಸ್ಥೆಯ ಅಧ್ಯಕ್ಷರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಡಾ ಶಶೀಲ್ ಜಿ ನಮೋಶಿ, ಉಪಾಧ್ಯಕ್ಷರಾದ ರಾಜಾ ಭಿ ಭೀಮಳ್ಳಿ, ಕಾರ್ಯದರ್ಶಿಗಳಾದ ಉದಯಕುಮಾರ್ ಚಿಂಚೋಳಿ, ಜಂಟಿ ಕಾರ್ಯಾದರ್ಶಿಗಳಾದ ಡಾ ಕೈಲಾಸ ಪಾಟೀಲ್ ಆಸ್ಪತ್ರೆಯ ಸಂಚಾಲಕರಾದ ಡಾ ಕಿರಣ ದೇಶಮುಖ್ ಹಾಗೂ ಆಡಳಿತ ಮಂಡಳಿ ಸದಸ್ಯರು ಡೀನ್ ಡಾ ಶರಣಗೌಡ ಪಾಟೀಲ್, ವೈಸ್ ಡೀನ್ ಡಾ ವಿಜಯಕುಮಾರ್ ಕಪ್ಪಿಕೇರಿ, ಡಾ ಗುರುಲಿಂಗಪ್ಪ ಪಾಟೀಲ್, ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕರಾದ ಡಾ ಮಲ್ಲಿಕಾರ್ಜುನ ತೇಗನೂರ ಅಭಿನಂದಿಸಿದ್ದಾರೆ

## ಸಾಲ ಬಾಧೆ ರೈತ ಆತ್ಮಹತ್ಯೆ

**ಜೇವರ್ಗಿ:ಜ.1:** ಸಾಲಬಾಧೆಯಿಂದ ರೈತನೊಬ್ಬ ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಂಡ ಘಟನೆ ತಾಲ್ಲೂಕಿನ ಕೆಲ್ಲೂರ ಗ್ರಾಮದಲ್ಲಿ ಮಂಗಳವಾರ ನಡೆದಿದೆ. ನಿಂಗಣ್ಣ ಮಲ್ಲೇಶಪ್ಪ ದೇಸಾಯಿ (37) ಆತ್ಮಹತ್ಯೆ ಮಾಡಿಕೊಂಡಿದ್ದು, ಅವರಿಗೆ ಪತ್ನಿ, ಪುತ್ರ, ಪುತ್ರಿ ಇದ್ದಾರೆ.ನಿಂಗಣ್ಣ ತಮ್ಮ 2.21 ಎಕರೆ ಸ್ವಂತ ಜಮೀನು ಹಾಗೂ ಹತ್ತಾರು ಎಕರೆ ಜಮೀನು ಲೀಜ್ ಪಡೆದುಕೊಂಡು ಕೃಷಿ ಮಾಡುತ್ತಿದ್ದರು. ಕೈಗೆ ಬಂದ ಹತ್ತಿ ಹಾಗೂ ಇತರೆ ಬೆಳೆ ಅತಿವೃಷ್ಟಿಯಿಂದ ನಾಶವಾಗಿ ಲಕ್ಷಾಂತರ ರೂಪಾಯಿ ನಷ್ಟ ಅನುಭವಿಸಿದ್ದರು.ಡಿಸಿಸಿ ಬ್ಯಾಂಕಿನಲ್ಲಿ 22 ಸಾವಿರ, ಖಾಸಗಿಯಾಗಿ 10.5 ಲಕ್ಷ ಸಾಲ ಮಾಡಿದ್ದರು. ಸಾಲಬಾಧೆಗೆ ಮನನೊಂದು ತಮ್ಮ ಹೊಲದಲ್ಲಿ ಮಂಗಳವಾರ ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಅವರ ಪತ್ನಿ ವಿಜಯಲಕ್ಷ್ಮೀ ದೂರಿನಲ್ಲಿ ತಿಳಿಸಿದ್ದಾರೆ.ಘಟನಾ ಸ್ಥಳಕ್ಕೆ ಪಿಎಸ್‌ಐ ಗಜಾನಂದ ಬಿರಾದಾರ ಹಾಗೂ ಸಿಬ್ಬಂದಿ ಭೇಟಿ ನೀಡಿ ಪರಿಶೀಲಿಸಿದ್ದಾರೆ. ಜೇವರ್ಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಜನವರಿ 5 ರಂದು ಶ್ರೀ ರಾಮಲಿಂಗ ಚೌಡೇಶ್ವರಿ ಜಾತ್ರಾ ಮಹೋತ್ಸವ


ಯುವಮಾರ್ಗ ಸುದ್ದಿ

**ಮಾನ್ವಿ,ಜ.1–** ಇದೇ ತಿಂಗಳ 5 ರಂದು ಪಟ್ಟಣದ ಶ್ರೀ ರಾಮಲಿಂಗ ಚೌಡೇಶ್ವರಿ ಜಾತ್ರಾ ಮಹೋತ್ಸವ ಜರುಗಲಿದೆ ಎಂದು ದೇವಸ್ಥಾನದ ಅನುವಂಶಿಕ ಧರ್ಮದರ್ಶಿ ಜಿ. ಶಿವಶಂಕರ ಸಾಹುಕಾರ ಮತ್ತು ಸಹೋದರರು ತಿಳಿಸಿದ್ದಾರೆ.

3 ರಂದು ಶನಿವಾರ ಬನದ ಹುಣ್ಣಿಮೆಯ ಪ್ರಯುಕ್ತ ಅಂದು ಬೆಳಿಗ್ಗೆ ಹೊಳೆ ನೀರಿನ ಸೇವಾ ಮೆರವಣಿಗೆ ಜಡೇಬಸ್ಸಪ್ಪನವರ ಗುಡಿಯಿಂದ ಚೌಡೇಶ್ವರಿ ದೇವಸ್ಥಾನದವರೆಗೆ ಜರುಗುವುದು ನಂತರ ದೇವಿಗೆ ಮಹಾ ಅಭಿಷೇಕ ಮತ್ತು ಮಹಾ ಮಂಗಳಾರತಿ ನಡೆಯುವುದು ನಂತರ ಅಂದು ಮಧ್ಯಾಹ್ನ 1–30 ಕ್ಕೆ ಮಹಾಪ್ರಸಾದ ಜರುಗುವುದು.

ದಿನಾಂಕ 4 ರವಿವಾರದಂದು ಅಮ್ಮನವರ ಉಚ್ಚಾಯ ಮಹೋತ್ಸವ ನಡೆಯುವುದು 5 ರಂದು ಸೋಮವಾರ ಸಂಜೆ ಶ್ರೀ ರಾಮಲಿಂಗ ಚೌಡೇಶ್ವರಿ ತಾಯಿಯ ಮಹಾರಥೋತ್ಸವ ಅದ್ದೂರಿಯಾಗಿ ನಡೆಯಲಿದೆ.

ದಿನಾಂಕ 6 ಮಂಗಳವಾರದಂದು ಗರುಡುಪಟ



ಇಳಿಸುವುದರೊಂದಿಗೆ ಜಾತ್ರಾ ಮಹೋತ್ಸವ ಸಂಪನ್ನಗೊಳ್ಳಲಿದೆ. ಅದ್ದರಿಂದ ಸರ್ವ ಜನತೆ ಈ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡು ಶ್ರೀ ರಾಮಲಿಂಗ ಚೌಡೇಶ್ವರಿ ತಾಯಿಯ ಕೃಪೆಗೆ ಪಾತ್ರರಾಗಬೇಕು ಎಂದು ದೇವಾಂಗ ಸಮಾಜದ ಸೇವಾ ಬಳಗ ಪ್ರಕಟಣೆಯಲ್ಲಿ ತಿಳಿಸಿದೆ.

# ನಸಲಾಪುರ ಶಾಲೆಯ ಅಕ್ಷತಾ ಕನ್ನಡ ಕಂಠ ಪಾಠ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆ

ಯುವಮಾರ್ಗ ಸುದ್ದಿ

**ಮಾನ್ವಿ,ಜ.1–** ನಸಲಾಪುರ ಶಾಲೆಯ 7ನೇ ತರಗತಿ ವಿದ್ಯಾರ್ಥಿನಿ ಕು.ಅಕ್ಷತಾ ತಂದೆ ನಾಗರಾಜ್ ನಾಯಕ ತಾಲೂಕು ಮಟ್ಟದ ಪ್ರತಿಭಾ ಕಾರಂಜಿಯಲ್ಲಿ ಕನ್ನಡ ಕಂಠಪಾಠ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ಜಿಲ್ಲಾಮಟ್ಟಕ್ಕೆ ಆಯ್ಕೆಯಾಗಿರುತ್ತಾಳೆ.ಬಲ್ಲಟಗಿಯಲ್ಲಿ ನಡೆದ ತಾಲೂಕ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮದಲ್ಲಿ ಸ.ಹಿ.ಪ್ರಾ.ಶಾಲೆಯ ನಸಲಾಪುರ ಗ್ರಾಮದ ಕು. ಅಕ್ಷತಾ ಕನ್ನಡ ಕಂಠಪಾಠ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದುಕೊಂಡು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿ ಶಾಲೆಗೆ ಹಾಗೂ ಊರಿಗೆ ಕೀರ್ತಿ ತಂದಿದ್ದಾಳೆ.ಮುಂದೆ ರಾಜ್ಯ ಮಟ್ಟಕ್ಕೆ ಆಯ್ಕೆಯಾಗಲೆಂದು

ಶಾಲೆಯ ಮುಖ್ಯೋಪಾಧ್ಯಾಯರಾದ ಕೃಷ್ಣಪ್ಪ, ಸಹಶಿಕ್ಷಕರಾದ ಲಕ್ಷ್ಮಣ ನಾಯ್ಕ್,ಅಶ್ವಿನಿ, ಅತಿಥಿ



ಶಿಕ್ಷಕಿಯರಾದ ನಿರ್ಮಲಾ, ರಾಧಾ, ಬನಶಂಕರಿ ಎಸ್.ಡಿ.ಎಂ.ಸಿ ಅಧ್ಯಕ್ಷರಾದ ಕೃಷ್ಣಯ್ಯ ನಾಯಕ, ಪದಾಧಿಕಾರಿಗಳು ಹಾಗೂ ಊರಿನ ಗ್ರಾಮಸ್ಥರು ಅಭಿನಂಧಿಸಿದ್ದಾರೆ.

# ವಿಶೇಷ ಮಧ್ಯಸ್ಥಿಕೆ 2.0 ಅಭಿಯಾನ ಇಂದಿನಿಂದ ಪ್ರಾರಂಭ

**ರಾಯಚೂರು,ಜ.1–** ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ದೇಶದ ಎಲ್ಲಾ ನ್ಯಾಯಾಲಯಗಳಲ್ಲಿ ಬಾಕಿ ಇರುವ ಮಧ್ಯಸ್ಥಿಕೆ ಮೂಲಕ ರಾಜಿ ಆಗಬಹುದಾದ ಪ್ರಕರಣಗಳ ಕುರಿತು ವಿಶೇಷ ಮಧ್ಯಸ್ಥಿಕೆಯ ಅಭಿಯಾನ 2.0 ಅನ್ನು ಜನವರಿ 2ರಿಂದ 90ದಿನಗಳ ಕಾಲ ಆಯೋಜಿಸಲಾಗಿದ್ದು, ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಮಧ್ಯಸ್ಥಿಕೆಯ ಅಭಿಯಾನ ಜರುಗಲಿದೆ. ರಾಜಿ ಆಗಬಹುದಾದ ಪ್ರಕರಣಗಳನ್ನು ಮಧ್ಯಸ್ಥಿಕೆ ಕೇಂದ್ರಗಳಿಗೆ ಕಳುಹಿಸಿ ಅಲ್ಲಿ ವಿಶೇಷ ತರಬೇತಿ ಹೊಂದಿದ ಮಧ್ಯಸ್ಥಿಕೆಗಾರರಿಂದ ರಾಜಿ ಸಂಧಾನ ಮಾಡಿಸುವ ವ್ಯವಸ್ಥೆ ಇದಾಗಿದೆ ಎಂದು ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಎಚ್.ಎ. ಸಾತ್ವಿಕ್ ಅವರು ತಿಳಿಸಿದ್ದಾರೆ.

ಕಕ್ಷಿದಾರರು ಈ ಅಭಿಯಾನದ ಸದುಪಯೋಗ ಪಡೆದುಕೊಳ್ಳಬೇಕು. ಮಾಹಿತಿಗೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಥವಾ ಜಿಲ್ಲೆಯ ತಾಲ್ಲೂಕು ಕಾನೂನು ಸೇವಾ ಸಮಿತಿಗಳಾದ ಸಿಂಧನೂರು, ಲಿಂಗಸೂಗೂರು, ಮಾನವಿ, ದೇವದುರ್ಗ ಕಚೇರಿಗಳನ್ನು ಸಂಪರ್ಕಿಸಬಹುದು ಎಂದು ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ**
**9743497111, 9743496111**

# ಜನವರಿ 3ರಂದು ಶ್ರೀ ಅಂಬಾದೇವಿ ಮಹಾರಥೋತ್ಸವ, ಸಿಂಧನೂರು ವಿಧಾನಸಭಾ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ, ಲೋಕಾರ್ಪಣೆ

ಯುವಮಾರ್ಗ ಸುದ್ದಿ

**ರಾಯಚೂರು,ಜ.1–**ಜಿಲ್ಲೆಯ ಸಿಂಧನೂರು ತಾಲೂಕು ಆಡಳಿತ, ತಾಲೂಕು ಪಂಚಾಯತ ಹಾಗೂ ಧಾರ್ಮಿಕ ದತ್ತಿ ಇಲಾಖೆಯ ಶ್ರೀ ಅಂಬಾದೇವಿ ವ್ಯವಸ್ಥಾಪನಾ ಸಮಿತಿಯ ಸಂಯುಕ್ತಾಶ್ರಯದಲ್ಲಿ ಶ್ರೀ ಅಂಬಾ ಮಹೋತ್ಸವ–2026ರ ಭಕ್ತಿ ಶಕ್ತಿ ಪರಂಪರೆಯ ದಿವ್ಯ ಸಂಗಮ ಜಾತ್ರಾ ಮಹೋತ್ಸವ ಹಾಗೂ ಸಿಂಧನೂರು ವಿಧಾನಸಭಾ ಕ್ಷೇತ್ರದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಮತ್ತು ಲೋಕಾರ್ಪಣೆ ಸಮಾರಂಭವು ಜನವರಿ 3ರ ಮಧ್ಯಾಹ್ನ 3 ಗಂಟೆಗೆ ಅಂಬಾದೇವಿ ಮಠದ ಆವರಣದಲ್ಲಿ ನಡೆಯಲಿದೆ.

ಕರ್ನಾಟಕ ಸರ್ಕಾರದ ಸನ್ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಹಾಗೂ ಕರ್ನಾಟಕ ಸರ್ಕಾರದ ಸನ್ಮಾನ್ಯ ಉಪ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್, ಸಾರಿಗೆ ಮತ್ತು ಮುಜರಾಯಿ ಇಲಾಖೆಯ ಸಚಿವರಾದ ರಾಮಲಿಂಗಾರೆಡ್ಡಿ, ಲೋಕೋಪಯೋಗಿ ಇಲಾಖೆ ಸಚಿವರಾದ ಸತೀಶ್ ಲ. ಜಾರಕಿಹೊಳಿ, ಕಂದಾಯ ಇಲಾಖೆ ಸಚಿವರಾದ ಕೃಷ್ಣ ಭೈರೇಗೌಡ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಹಾಗೂ ಐಟಿ ಮತ್ತು ಬಿಟಿ ಇಲಾಖೆಯ ಸಚಿವರಾದ ಪ್ರಿಯಾಂಕ್ ಖರ್ಗೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರಾದ ಶಿವರಾಜ ಎಸ್.ತಂಗಡಗಿ ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.

ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ ಅವರು ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ. ಎಸ್.ಶಿವರಾಜ ಪಾಟೀಲ್, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಸಿಂಧನೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ವೆಂಕನಗೌಡ (ಬಾಬುಗೌಡ) ಬಾದರ್ಲಿ, ಅಂಬಾದೇವಿ ವ್ಯವಸ್ಥಾಪನಾ ಸಮಿತಿಯ ಅಧ್ಯಕ್ಷರಾದ ರಂಗನಗೌಡ, ಸೋಮಲಾಪುರ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ರೇಣುಕಮ್ಮ ಹುಸೇನಪ್ಪ ಮನ್ನಾಪುರ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷರಾದ ಎಂ.ದೊಡ್ಡಬಸವರಾಜ, ಟಿಎಪಿಸಿಎಮ್‌ಎಸ್ ಅಧ್ಯಕ್ಷರಾದ ಶರಣಪ್ಪ ರಡ್ಡೇರ್, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಅನಿಲ್‌ಕುಮಾರ ವೈ. ಅವರು ಮುಖ್ಯ ಅತಿಥಿಗಳಾಗಿ ಉಪಸ್ಥಿತರಿರುವರು.

ವಿಶೇಷ ಆಹ್ವಾನಿತರಾಗಿ ಮುಖ್ಯ ಮಂತ್ರಿಗಳ ಆರ್ಥಿಕ ಸಲಹೆಗಾರರು ಹಾಗೂ ಯಲಬುರ್ಗಾ ಶಾಸಕರಾದ ಬಸವರಾಜ ರಾಯರೆಡ್ಡಿ, ಬಳ್ಳಾರಿ ಲೋಕಸಭಾ ಕ್ಷೇತ್ರ ಸದಸ್ಯರಾದ ಇ. ತುಕಾರಾಂ, ಬಳ್ಳಾರಿ ಗ್ರಾಮೀಣ ಶಾಸಕರಾದ ಬಿ.ನಾಗೇಂದ್ರ, ಕೊಪ್ಪಳ ಶಾಸಕರಾದ ಕೆ. ರಾಘವೇಂದ್ರ ಹಿಟ್ನಾಳ, ಇಂಡಿ ಶಾಸಕರಾದ ಯಶವಂತರಾಯಗೌಡ ಪಾಟೀಲ, ರಾಮದುರ್ಗ ಶಾಸಕರಾದ ಅಶೋಕ ಎಂ. ಪಟ್ಟಣ, ಬೈಲಹೊಂಗಲ ಶಾಸಕರಾದ ಮಹಾಂತೇಶ ಎಸ್. ಕೌಜಲಗಿ, ಸಿರುಗುಪ್ಪ ಶಾಸಕರಾದ ಶಾಸಕರಾದ ಬಿ.ಎಂ.ನಾಗರಾಜ, ಕೂಡ್ಲಿಗಿ ಶಾಸಕರಾದ ಡಾ. ಎನ್.ಟಿ. ಶ್ರೀನಿವಾಸ, ಕಂಪ್ಲಿ ಶಾಸಕರಾದ ಜೆ.ಎನ್. ಗಣೇಶ, ಬಳ್ಳಾರಿ ನಗರ ಶಾಸಕರಾದ ಎನ್. ಭರತ್‌ರೆಡ್ಡಿ ಅವರು ಭಾಗಿಯಾಗಲಿದ್ದಾರೆ.ಅತಿಥಿಗಳಾಗಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ, ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಭಾಗಿಯಾಗಲಿದ್ದಾರೆ. ಸಂಜೆ 5ಗಂಟೆಗೆ ಅಂಬಾದೇವಿ ಮಹಾರಥೋತ್ಸವ ಮತ್ತು ಜಂಬೂ ಸವಾರಿ ನಡೆಯಲಿದೆ. ಬಳಿಕ ಸರಿಗಮಪ ಖ್ಯಾತಿಯ ಗಾಯಕರಾದ ಸುಪ್ರೀತ್ ಹಾಗೂ ಪೃಥ್ವಿ ಭಟ್ ಅವರಿಂದ ಸಂಗೀತ ಗಾಯನ, ನರಸಿಂಹ ಜೋಶಿ ಮತ್ತು ಶ್ರೀಮತಿ ಇಂದುಮತಿ ಸಾಲಿಮಠ ಅವರಿಂದ ಹಾಸ್ಯ ಸಂಜೆ ಕಾರ್ಯಕ್ರಮ, ಸ್ಥಳೀಯ ಶಾಲಾ–ಕಾಲೇಜು ತಂಡಗಳಿಂದ ಸಾಂಸ್ಕೃತಿಕ ನೃತ್ಯ ಕಾರ್ಯಕ್ರಮ ಹಾಗೂ ನಾರಾಯಣಪ್ಪ ವಾಡಸಿರವಾರ ತಂಡದವರಿಂದ ಅಹೋರಾತ್ರಿ ತತ್ವಪದ ಗಾಯನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಭಾವೈಕ್ಯತೆಬೆಳೆಸುವ ಭಾರತ್ ಸೇವಾದಳ ಸೇವಾದಳ ಸಪ್ತಾಹ ಕಾರ್ಯಕ್ರಮ

ಯುವಮಾರ್ಗ ಸುದ್ದಿ

**ಮಾನ್ವಿ,ಜ.1–** ಮಕ್ಕಳು ಯುವ ಸಮುದಾಯ ಶಿಕ್ಷಕರು ಹಾಗೂ ಜನಸಾಮಾನ್ಯರಿಗೆ ರಾಷ್ಟ್ರೀಯ ಭಾವೈಕ್ಯತೆ ರಾಷ್ಟ್ರ ಪ್ರೇಮ ಬೆಳೆಸುವುದೇ ಭಾರತ ಸೇವಾದಳದ ಮೂಲ ಉದ್ದೇಶವಾಗಿದೆ ಎಂದು ಭಾರತ ಸೇವಾದಳ ವಿಭಾಗ ಸಂಘಟಖರಾದ ವಿದ್ಯಾಸಾಗರ್ ಚಿಣಮಗೇರಿ ಹೇಳಿದರು

ಭಾರತ ಸೇವಾದಳ ಜಿಲ್ಲಾ ಸಮಿತಿ ರೈಚೂರು ಶಾಲಾ ಶಿಕ್ಷಣ ಇಲಾಖೆ ಸಂಯುಕ್ತಾಶ್ರಯದಲ್ಲಿ ಸರ್ಕಾರಿ ಪ್ರೌಢಶಾಲೆ ಕೋನಾಪುರಪೇಟ್ ಸೇವಾದಳ ಅಮೃತ ಮಹೋತ್ಸವ ಅಂಗವಾಗಿ ಸೇವಾದಳ ಸಪ್ತಾಹ ಆಚರಣೆ ದೇಶಭಕ್ತಿ ಗೀತೆಗಳ ಭಾಗವಹಿಸಿ ವಿಜೇತರಾದವರಿಗೆ ಪ್ರಶಸ್ತಿ ಪತ್ರವಹಿತರಿಸಿ ವಹಿಸಿ ಮಾತನಾಡಿದರು

ಭಾರತ ಸೇವಾದಳ ಮುಂಚೆ ಹಿಂದೂಸ್ತಾನಿ ಸೇವಾದಳ ಎಂದು 1923 ಡಿಸೆಂಬರ್ 28 ರಲ್ಲಿ ಪಂಡಿತ್ ಜವಾಹರ್ ಲಾಲ್ ನೆಹರು ಅವರು ಪ್ರಥಮ ಅಧ್ಯಕ್ಷರಾಗಿ, ಡಾ. ಎನ್ ಎಸ್ ಹರಡಿಕರ್ ಅವರು ಸಂಚಾಲಕರಾಗಿದ್ದರು ಸ್ವಾತಂತ್ರ್ಯ ನಂತರ 1950 ಮಾರ್ಚ್ 16ರಂದು ಹಾಸನ ಜಿಲ್ಲೆ ಬೇಲೂರಿನಲ್ಲಿ ಭಾರತ ಸೇವಾದಳ ಎಂದು ಮರುನಾಮಕರಣ ಮಾಡಲಾಯಿತು ಎಂದು ಹೇಳಿದರು ಭಾರತ್ ಸೇವಾ ದಳ ಪ್ರಸ್ತುತ ರಾಜ್ಯ ಶಾಲಾ ಶಿಕ್ಷಣ ಇಲಾಖೆ ಅನುದಾನಿತ ಸಂಸ್ಥೆಯಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು.

ಭಾರತ್ ಸೇವಾದಳ ತಾಲೂಕ ಕಾರ್ಯದರ್ಶಿ



ಹಾಗೂ ಸಂಪನ್ಮೂಲ ವ್ಯಕ್ತಿಯಾದ ಡಾ. ಮಹಿಬೂಬ್ ಮದ್ಲಾಪುರ ಮಾತನಾಡುತ್ತಾ ಇಂದಿನ ಯುವ ಜನಾಂಗ ಯಾವುದೇ ದುಶ್ಚಟಗಳಿಗೆ ಬಲಿಯಾಗದೆ ಉತ್ತಮ ಆರೋಗ್ಯವನ್ನು ಕಾಪಾಡಿಕೊಂಡು ದೇಶ ಸೇವೆಗೆ ಮುಂದಾಗಬೇಕೆಂದು ದೇಶಕ್ಕಾಗಿ ಪ್ರಾಣ ಕೊಡಲು ಸಿದ್ದರಿರಬೇಕು ನಮ್ಮ ಸ್ವಾತಂತ್ರ್ಯಕ್ಕಾಗಿ ಹೋರಾಟದ ಇತಿಹಾಸ ಓದಿ, ಧರ್ಮ, ಜಾತಿ, ಮತಗಳ ಇದ್ದರು ನಮ್ಮಲ್ಲಿ ಐಕ್ಯತೆ ಭಾವೈಕ್ಯತೆ ಇದ್ದು ಪಾಲಿಸಬೇಕು. ಎಂದು ಹೇಳಿದರು.

ಯೋಗ ಗುರು ಹಾಗೂ ದೈಹಿಕ ಶಿಕ್ಷಣ ಶಿಕ್ಷಕ ಮೌನೇಶ್ ಪೋತ್ನಾಳ್ ಮಾತನಾಡುತ್ತಾ "ಮಕ್ಕಳು ಯುವಕರು ಏಕಾಗ್ರತೆ ಬರಲು ಆರೋಗ್ಯ ಕಾಪಾಡಿಕೊಳ್ಳಲು ಪ್ರತಿನಿತ್ಯ ಯೋಗ ಧ್ಯಾನ ಪ್ರಾಣಾಯಾಮಮಾಡಬೇಕೆಂದು ಹೇಳಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿ ಶಾಲೆಯ ಮುಖ್ಯೋಪಾಧ್ಯಾಯ ವಿರುಪಾಕ್ಷಪ್ಪ ಮಾತನಾಡುತ್ತಾ "ಗಾಂಧಿ ಟೋಪಿ ಹಾಕುವುದರಿಂದ ಸ್ವತಃ ಆತ್ಮಸ್ಥೈರ್ಯ, ಸ್ವಾಭಿಮಾನ, ದೇಶ ಪ್ರೇಮ, ನಿಷ್ಠೆ, ದೇಶಭಕ್ತಿ ಬೆಳೆಯುತ್ತದೆ ಅಂದು ಸ್ವತಂತ್ರ ಹೋರಾಟಗಾರರು ಗಾಂಧಿ ಟೋಪಿಯನ್ನು ಹಾಕಿಕೊಳ್ಳುತ್ತಿದ್ದರು ಅವರಿಗೆ ಪೂಜ್ಯ ಮನೋಭಾವನೆಯಿಂದ ನೋಡುತ್ತಿದ್ದರು ಆದ್ದರಿಂದ ಭಾರತ ಸೇವಾದಳ ಸ್ವತಂತ್ರಕ್ಕಾಗಿ ಹೋರಾಡಿದ ಸಂಸ್ಥೆ ನಾವೆಲ್ಲರೂ ಹೆಮ್ಮೆಯಿಂದ ಈ ಚಟುವಟಿಕೆಯಲ್ಲಿ ಭಾಗವಹಿಸೋಣ ಎಂದು ಹೇಳಿದರು

ಕಾರ್ಯಕ್ರಮದಲ್ಲಿ ಶಿಕ್ಷಕರಾದ ಸಂಜೀವಪ್ಪ ಅವರು ಶಾಲೆಯಲ್ಲಿ ಇಂಥ ಕಾರ್ಯಕ್ರಮ ಹಮ್ಮಿಕೊಳ್ಳುವುದರಿಂದ ಮಕ್ಕಳಲ್ಲಿ ದೇಶಪ್ರೇಮ ಬೆಳೆಯುತ್ತದೆ ಎಂದು ಹೇಳಿದರು

ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ದೇಶಭಕ್ತಿ ದೇಶ ಸ್ಪರ್ಧೆಯಲ್ಲಿ ತ್ರಿಶಾ ಪ್ರಥಮ, ಸಿಮ್ರಾನ್ ದ್ವಿತೀಯ, ನಂದಿನಿ ದ್ವಿತೀಯ ಸ್ಥಾನದಿಂದ ಪ್ರಶಸ್ತಿ ಪತ್ರ ಪಡೆದುಕೊಂಡರು.

# ರಾಯಚೂರು ಉತ್ಸವ: ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಮತ್ತೊಂದು ಸುತ್ತಿನ ಸಿದ್ಧತಾ ಸಭೆ

ಯುವಮಾರ್ಗ ಸುದ್ದಿ

**ರಾಯಚೂರು,ಜ.1–** ಜನವರಿ 29, 30 ಹಾಗೂ 31ರಂದು ಮೂರು ದಿನಗಳ ಕಾಲ ನಿಗದಿಯಾದ ರಾಯಚೂರು ಉತ್ಸವ ತಯಾರಿ ನಿಮಿತ್ತ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರ ಅಧ್ಯಕ್ಷತೆಯಲ್ಲಿ ಮತ್ತೊಂದು ಸುತ್ತಿನ ಸಿದ್ಧತಾ ಸಭೆಯು ಜನವರಿ 01ರಂದು ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆಯಿತು. ಸಭೆಯಲ್ಲಿ, ಮೊದಲನೇ ಸಭೆಯ ನಂತರ ಇದುವರೆಗೆ ನಡೆದ ಸಿದ್ಧತೆಯ ಬಗ್ಗೆ ಮತ್ತು ಆಯಾ ಸಮಿತಿಗಳು ನಿರ್ವಹಿಸಬೇಕಾದ ಕಾರ್ಯಗಳ ಬಗ್ಗೆ ಜಿಲ್ಲಾಧಿಕಾ ರಿಗಳು, ಸಮಿತಿವಾರು ಉತ್ಸವ ಹಿನ್ನೆಲೆಯಲ್ಲಿ ರಚಿಸಿದ ವಿವಿಧ 22 ಸಮಿತಿಗಳ ಅಧ್ಯಕ್ಷರು ಮತ್ತು ಸದಸ್ಯ ಕಾರ್ಯದರ್ಶಿಗಳಿಂದ ಮಾಹಿತಿ ಪಡೆದುಕೊಂಡರು.

ಈ ವೇಳೆ ಜಿಲ್ಲಾಧಿಕಾರಿಗಳು ಮಾತನಾಡಿ, ಆಯಾ ಸಮಿತಿಯಲ್ಲಿನ ಎಲ್ಲ ಅಧಿಕಾರಿಗಳು ಮುತುವರ್ಜಿಯಿಂದ ಕಾರ್ಯನಿರ್ವಹಿಸಬೇಕು. ಯಾರು ಸಹ ನಿರ್ಲಕ್ಷ ಮಾಡಬಾರದು. ಸಮಿತಿವಾರು ಸೂಚಿಸಿದ ಎಲ್ಲ ಕಾರ್ಯಗಳು ಸಕಾಲಕ್ಕೆ ಪೂರ್ಣವಾಗಬೇಕು. ಸಭೆ ನಡೆಸಿ ತಿಳಿಸಿದಾಗ್ಯೂ ಯಾರಾದರು ನಿರ್ಲಕ್ಷ ವಹಿಸುವುದು ಕಂಡು ಬಂದಲ್ಲಿ ನಿರ್ಧಾಕ್ಷಿಣ್ಯವಾಗಿ ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಆಹ್ವಾನ ಪತ್ರಿಕೆ, ನೆನಪಿನ ಕಾಣಿಕೆ, ಪ್ರಮಾಣ ಪತ್ರ, ಬ್ಯಾನರ್ ಎಲ್ಲವೂ ಸಕಾಲಕ್ಕೆ ಸಿದ್ಧವಾಗಬೇಕು. ವಿಶೇಷವಾಗಿ ಮೂಲಭೂತ ಸೌಲಭ್ಯ ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಸಮಿತಿಯು ವಿಶೇಷ ಕಾಳಜಿ ವಹಿಸಿ ವೇದಿಕೆ ನಿರ್ಮಾಣ, ತಾತ್ಕಾಲಿನ ಬಸ್ ನಿಲ್ದಾಣ, ಸಹಾಯವಾಣಿ ಕೇಂದ್ರಗಳ ಆರಂಭಕ್ಕೆ ಒತ್ತು ಕೊಡಬೇಕು. ಕುಡಿಯುವ ನೀರಿನ ಸರಬರಾಜುಗಾಗಿ ತಾತ್ಕಾಲಿಕವಾಗಿ ಸ್ಥಾವರ ನಿರ್ಮಾಣ, ಶುದ್ಧ ಕುಡಿಯುವ ನೀರಿನ ಪೂರೈಕೆಗೆ ಒತ್ತು ಕೊಡಬೇಕು. ಜನರಿಗೆ ಅನುಕೂಲವಾಗುವಂತೆ ಅಲ್ಲಲ್ಲಿ ತಾತ್ಕಾಲಿಕ ಶೌಚಾಲಯಗಳ ನಿರ್ಮಾಣ, ರಾಯಚೂರು ಹಾಗೂ ರಾಯಚೂರಿಗೆ ಬರುವ ಎಲ್ಲ ರಸ್ತೆಗಳ ದುರಸ್ತಿ ಮತ್ತು ರಸ್ತೆಗಳ ಪಕ್ಕದಲ್ಲಿ ಕೆಂಪು ಮಣ್ಣು ಹಾಗೂ ಜಂಗಲ್ ಕಟಿಂಗ್ ವ್ಯವಸ್ಥೆ ಮಾಡಬೇಕು. ರಾಯಚೂರು ರೈಲ್ವೆ ನಿಲ್ದಾಣ ಮತ್ತು ಬಸ್ ನಿಲ್ದಾಣಗಳಲ್ಲಿ ಈಗಿನಿಂದಲೇ ತಾತ್ಕಾಲಿಕ ಸ್ವಾಗತ ಕೌಂಟರ್ ವ್ಯವಸ್ಥೆ ಮಾಡಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಉತ್ಸವದ ನಿಮಿತ್ತ ಹಮ್ಮಿಕೊಂಡ ಕುಸ್ತಿ, ವಾಲಿವಾಲ್, ಕ್ರಿಕೇಟ್ ಸೇರಿದಂತೆ ಎಲ್ಲಾ ಪಂದ್ಯಗಳನ್ನು ಸಕಾಲಕ್ಕೆ ಅಚ್ಚುಕಟ್ಟಾಗಿ ನಡೆಯುವಂತೆ ನೋಡಿಕೊಳ್ಳಲು ಸೂಚನೆ ನೀಡಿದರು. ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಮಾತನಾಡಿ, ಉತ್ಸವದ ಮೊದಲ ದಿನ ನಡೆಯುವ ಮೆರವಣಿಗೆಗೆ ಈಗಿನಿಂದಲೇ ಅಚ್ಚುಕಟ್ಟಾಗಿ ಸಿದ್ಧತೆ ಮಾಡಿಕೊಳ್ಳಬೇಕು. ಜಿಲ್ಲೆಯಲ್ಲಿನ ವಿವಿಧ ಸಂಘ ಸಂಸ್ಥೆಗಳ ಎಲ್ಲ ಪ್ರತಿನಿಧಿಗಳು, ಸಾಹಿತಿಗಳು, ಕಲಾವಿದರು, ಶಿಕ್ಷಕರು, ಸ್ವಸಹಾಯ ಸಂಘದ ಮಹಿಳೆಯರು, ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು, ವಸತಿ ನಿಲಯಗಳು ಸೇರಿದಂತೆ



ಎಲ್ಲ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಸೇರಿದಂತೆ ಜಿಲ್ಲೆಯಲ್ಲಿನ ಸರ್ವ ನಾಗರಿಕರು, ಯುವಜನರು ಭಾಗವಹಿಸುವಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು. ರಾಯಚೂರು ನಗರದಲ್ಲಿನ ಎಲ್ಲ ಸರ್ಕಾರಿ ಕಚೇರಿಗಳ ಆವರಣವನ್ನು ಆಯಾ ಇಲಾಖೆಗಳೇ ನಡೆಸಿ ಅಲ್ಲಿ ಜನವರಿ 26 ರಿಂದ ಉತ್ಸವ ಮುಗಿಯುವವರೆಗೆ ಲೈಟಿಂಗ್ ವ್ಯವಸ್ಥೆ ಮಾಡಿ ಅಲಂಕಾರಕ್ಕೆ ಈಗಿನಿಂದಲೇ ಅಧಿಕಾರಿಗಳು ಯೋಜನೆ ರೂಪಿಸಬೇಕು ಎಂದು ಸೂಚನೆ ನೀಡಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಗಳಾದ ಶಿವಾನಂದ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಸಿದ್ದಪ್ಪ ಪೂಜಾರಿ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ರಾಯಚೂರು ಪಾಲಿಕೆಯ ಸಮಿತಿ ಕಾರ್ಯದರ್ಶಿ ಕೃಷ್ಣ ಶಾವಂತಗೇರಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಈರಣ್ಣ ಬಿರಾದಾರ, ಮಹಾನಗರ ಪಾಲಿಕೆಯ ಉಪ ಆಯುಕ್ತರಾದ ಸಂತೋಷರಾಣಿ, ವಿವಿಧ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿದ್ದರು.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H